# ಅನಂತ ಜನಶಕ್ತಿ

ಸಂಪಾದಕ: ಎಸ್.ವೆಂಕಟೇಸುಲು

EDITOR : S VENKATESULU

ANANTHA JANA SAKTHI KANNADA DAILY ಕನ್ನಡ ದಿನಪತ್ರಿಕೆ

ಸಂಪುಟ : 01 ಸಂಚಿಕೆ : 26 ರಿ.ನಂ : ಕೆಎನ್‌ಎಎನ್ / 26 / ಎ5487 ಬಳ್ಳಾರಿ ಶನಿವಾರ ದಿನಾಂಕ : 01-08-2026 ಪುಟ : 04 ಬೆಲೆ : 2-00


## ಇಂದು ಭಾರಿ ಮಳೆ ಸಾಧ್ಯತೆ: ಹವಾಮಾನ ಇಲಾಖೆ ಎಚ್ಚರಿಕೆ

ಬೆಂಗಳೂರು: ರಾಜ್ಯದಲ್ಲಿ ನೈಋತ್ಯ ಮಾನ್ಸೂನ್ ಚುರುಕುಗೊಂಡಿದ್ದು, ಕರಾವಳಿ ಹಾಗೂ ಮಲೆನಾಡು ಭಾಗಗಳಲ್ಲಿ ಮಳೆಯ ಅಬ್ಬರ ಮುಂದುವರಿದಿದೆ. ಕಳೆದ 24 ಗಂಟೆಗಳಲ್ಲಿ ಕರಾವಳಿ ಕರ್ನಾಟಕದ ಹಲವು ಭಾಗಗಳಲ್ಲಿ ಹಾಗೂ ದಕ್ಷಿಣ ಒಳನಾಡಿನ ಅನೇಕ ಪ್ರದೇಶಗಳಲ್ಲಿ ಉತ್ತಮ ಮಳೆಯಾಗಿದ್ದು, ಉತ್ತರ ಒಳನಾಡಿನ ಕೆಲವೆಡೆ ಸಹ ಮಳೆಯಾಗಿದೆ ಎಂದು ಭಾರತೀಯ ಹವಾಮಾನ ಇಲಾಖೆ ತಿಳಿಸಿದೆ.

ಉಡುಪಿ ಜಿಲ್ಲೆಯ ಕೊಲ್ಲೂರು (9 ಸೆಂ.ಮೀ.), ಕೊಡಗು ಜಿಲ್ಲೆಯ ಭಾಗಮಂಡಲ (7 ಸೆಂ.ಮೀ.) ಹಾಗೂ ಶಿವಮೊಗ್ಗ ಜಿಲ್ಲೆಯ ಆಗುಂಬೆ (7 ಸೆಂ.ಮೀ.) ರಾಜ್ಯದಲ್ಲೇ ಅತಿ ಹೆಚ್ಚು ಮಳೆಯಾದ ಪ್ರದೇಶಗಳಾಗಿವೆ. ಶೃಂಗೇರಿ, ವಿರಾಜಪೇಟೆ, ಸೋಮವಾರಪೇಟೆ ಹಾಗೂ ಔರಾದ್ ಸೇರಿದಂತೆ ಹಲವು ಕಡೆಗಳಲ್ಲಿ 6 ಸೆಂ.ಮೀ.ವರೆಗೆ ಮಳೆಯಾಗಿದೆ. ಧರ್ಮಸ್ಥಳ, ಬೆಳ್ತಂಗಡಿ, ಜೋಯಿಡಾ, ತಾಳಗುಪ್ಪ ಸೇರಿದಂತೆ ಅನೇಕ ಪ್ರದೇಶಗಳಲ್ಲೂ ಉತ್ತಮ ಮಳೆಯಾಗಿದೆ ಎಂದು ಮಾಹಿತಿ ನೀಡಿದೆ.



# ಯಾವುದೇ ಕಾರಣಕ್ಕೂ ಬಂದ್ ಬೇಡ, ಅದರಿಂದ ಪರಿಹಾರ ಸಿಗಲ್ಲ: ಸಿಎಂ ಡಿಕೆ ಶಿವಕುಮಾರ್




ಬೆಂಗಳೂರು, ಜುಲೈ 31: ಸದ್ಯ ರಾಜ್ಯದಲ್ಲಿ ಕಾವೇರಿ ಜಲ ವಿವಾದ ಕಾವೇರಿದೆ. ತಮಿಳುನಾಡಿಗೆ ಕಾವೇರಿ ನೀರು ಹರಿಸುವಂತೆ ನೀಡಿರುವ ಅಘಾಒಂ ಆದೇಶವನ್ನು ಖಂಡಿಸಿ ಆಗಸ್ಟ್ 13 ರಂದು ಅಖಂಡ ಕರ್ನಾಟಕ ಬಂದ್‌ಗೆ ಕನ್ನಡಪರ ಸಂಘಟನೆಗಳು ಕರೆ ನೀಡಿವೆ. ಈ ಕುರಿತಾಗಿ ಪ್ರತಿಕ್ರಿಯಿಸಿರುವ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ 'ಯಾವುದೇ ಕಾರಣಕ್ಕೂ ಬಂದ್ ಬೇಡ, ಬಂದ್‌ನಿಂದ ಪರಿಹಾರ ಸಿಗಲ್ಲ. ದಯವಿಟ್ಟು ಬಂದ್ ಕೈಬಿಡಿ' ಎಂದು ಮನವಿ ಮಾಡಿದ್ದಾರೆ.

ತಮಿಳುನಾಡಿಗೆ ನೀರು ಹರಿಸುವಂತೆ ಅಘಾಒಂ ಆದೇಶ ವಿಚಾರವಾಗಿ ಮಾತನಾಡಿದ ಅವರು, '15 ದಿನಗಳ ಕಾಲ ಕಾವೇರಿ ನೀರು ಬಿಡುವಂತೆ ಆದೇಶಿಸಿದೆ. ಸಂಕಷ್ಟದ ಕಾಲದಲ್ಲಿ ಇಂತಹ ತೀರ್ಪು ಹೊರಬಿದ್ದಿದೆ. ಕಳೆದ ವರ್ಷ ಸಾಕಷ್ಟು ಮಳೆಯಾಗಿತ್ತು. ಹಾಗಾಗಿ ಹಿಂದಿನ ವರ್ಷ ತಮಿಳುನಾಡಿಗೆ 400ಕ್ಕೂ ಹೆಚ್ಚು ಟಿಎಂಸಿ ನೀರು ಹೋಗಿದೆ. ಸಿಡಬ್ಲ್ಯುಆರ್‌ಸಿ ಶಿಫಾರಸು ವಿರುದ್ಧ CWMAಗೆ ಮೇಲ್ಮನವಿ ಸಲ್ಲಿಸಿದ್ದೆವು' ಎಂದರು.

'CWMA ಸಭೆಗೆ ಯಾರೂ ಹೋಗಿಲ್ಲ ಅಂತಾ ವಿಪಕ್ಷಗಳು ಆರೋಪಿಸಿವೆ. ನಮ್ಮ ರಾಜ್ಯದ ಪರ ಮೂವರು ಹಿರಿಯ ಅಧಿಕಾರಿಗಳು ಹೋಗಿದ್ದರು. ನೀರು ಬಿಡುಗಡೆಗೆ ಕೆಲ ಸಮಯ ನೀಡುವಂತೆ ಮನವಿ ಮಾಡಿದ್ದೆವು. ತಮಿಳುನಾಡು ಅಧಿಕಾರಿಗಳೂ ಪ್ರಬಲ ವಾದ ಮಂಡಿಸಿದ್ದಾರೆ. ರಾಜ್ಯದ ಪರ ಎಸಿಎಸ್ ಗೌರವ್ ಗುಪ್ತಾ ಸಹ ಪ್ರಬಲ ವಾದ ಮಂಡಿಸಿದರು. ನಿಮಗೆ ಹೆಚ್ಚು ನೀರು ಬರುತ್ತಿದೆ ಎಂದು CWMAನವರು ಹೇಳಿದ್ದಾರೆ'.

### ನಮ್ಮ ರಾಜ್ಯದ ಹಿತ ಕಾಪಾಡುವುದೇ ಸರ್ಕಾರದ ಮುಖ್ಯ ಉದ್ದೇಶ: ಸಿಎಂ

'ಇನ್ನು ಹೇಮಾವತಿ ಶೇ.67ರಷ್ಟು ತುಂಬಿದೆ, ಕೆಆರ್‌ಎಸ್ 36%, ಹಾರಂಗಿ 95%, ಕಬನಿ 83% ನೀರು ತುಂಬಿದೆ. ಎಲ್ಲರ ಬಳಿಯೂ ಈ ದಾಖಲೆ ಇದೆ. ಆದರೆ ಈಗ ಕೊಟ್ಟಿರುವ ಆದೇಶ ಪ್ರಕಾರ 4.5 ಟಿಎಂಸಿ ನೀರು ಬಿಡಲು ಹೇಳಿದೆ. ಈಗಾಗಲೇ ನಮಗೂ ಒಳಹರಿವು ಬರುತ್ತಿದೆ. ಆದರೂ ನನ್ನ ಮತ್ತು ಸರ್ಕಾರದ ಕರ್ತವ್ಯ ರಾಜ್ಯದ ಹಿತ ಕಾಪಾಡಬೇಕು. ಹಿಂದಿನ ಪರಿಸ್ಥಿತಿ ನಮಗೆ ಗೊತ್ತಿದೆ. ಈ ವರ್ಷವು ಶಾಸಕರ ಸಭೆ ಕರೆದು ಮಾತಾಡಿದ್ದೇನೆ. ರೈತರ ರಕ್ಷಣೆ ನಾವು ಮಾಡಿದ್ದೇವೆ, ಕುಡಿಯುವ ನೀರಿಗೆ ವ್ಯವಸ್ಥೆ ಮಾಡಿದ್ದೇವೆ. ರಾಜ್ಯದ ಹಿತಕ್ಕೆ ಎಲ್ಲಾ ರೀತಿಯ ರಕ್ಷಣೆಗೆ ನಾವು ಬದ್ಧತೆ ತೋರಿಸಿದ್ದೇವೆ. ಈಗಲೂ ರಾಜ್ಯದ ಹಿತ ಕಾಪಾಡುವ ಬದ್ಧತೆ ನಮಗೆ ಇದೆ' ಎಂದಿದ್ದಾರೆ.

ತಮಿಳುನಾಡು ಸಿಎಂ ವಿಜಯ್ ಆಗಮನದ ವಿಚಾರವಾಗಿ ಮಾತನಾಡಿದ ಅವರು, 'ಈ ಬಗ್ಗೆ ಪತ್ರ ಬರೆದಿದ್ದಾರೆ. ರಾಜ್ಯದ ಸಿಎಸ್‌ಗೆ ತಮಿಳುನಾಡು ಸಿಎಸ್ ಪತ್ರ ಬರೆಯುವ ಮೂಲಕ ಆಗಸ್ಟ್ 3ರಂದು ತಮಿಳುನಾಡು ಸಿಎಂ ವಿಜಯ್ ಆಗಮನದ ಬಗ್ಗೆ ಮಾಹಿತಿ ನೀಡಿದ್ದಾರೆ.



## ಸಂಪುಟ ವಿಸ್ತರಣೆಗೆ ಹೈಕಮಾಂಡ್ ಗ್ರೀನ್ ಸಿಗ್ನಲ್: ಸೋಮವಾರ ಸಂಜೆ ಪ್ರಮಾಣವಚನ ಸಾಧ್ಯತೆ, 18 ಸಚಿವರ ಸೇರ್ಪಡೆ ನಿರೀಕ್ಷೆ..!

ಬೆಂಗಳೂರು: ರಾಜ್ಯ ಸಚಿವ ಸಂಪುಟ ವಿಸ್ತರಣೆಗೆ ಕಾಂಗ್ರೆಸ್ ಹೈಕಮಾಂಡ್ ಅಂತಿಮ ಹಂತದ ಒಪ್ಪಿಗೆ ನೀಡಿರುವ ಹಿನ್ನೆಲೆಯಲ್ಲಿ, ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನೇತೃತ್ವದ ಸರ್ಕಾರದ ಸಚಿವ ಸಂಪುಟ ವಿಸ್ತರಣೆ ಸೋಮವಾರ ನಡೆಯುವ ಸಾಧ್ಯತೆ ಹೆಚ್ಚಾಗಿದೆ. ನವದೆಹಲಿಯಲ್ಲಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ನಿವಾಸದಲ್ಲಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಲೋಕಸಭೆ ಪ್ರತಿಪಕ್ಷ ನಾಯಕ ರಾಹುಲ್ ಗಾಂಧಿ ಅವರೊಂದಿಗೆ ಮಹತ್ವದ ಸಭೆ ನಡೆಸಿದ್ದು, ಈ ಸಭೆಯಲ್ಲಿ ಸಚಿವ ಸಂಪುಟ ವಿಸ್ತರಣೆಗೆ ಅಂತಿಮ ರೂಪುರೇಷೆ

2ನೇ ಪುಟಕ್ಕೆ..

## ರಾಜ್ಯದ ಮೂರು ಪ್ರಮುಖ ಸಮಸ್ಯೆಗಳ ಕುರಿತು ರಾಹುಲ್‌ಗೆ ಪತ್ರ – ಚೇತನ್ ಅಹಿಂಸಾ

ಬೆಂಗಳೂರು :ಮೇಕೆದಾಟು ಯೋಜನೆ, ಗಣಿಗಾರಿಕೆ ಪರಿಶೀಲನೆ, ಬಿಡದಿ ಟೌನ್ಶಿಪ್ ಸಮಸ್ಯೆಗಳ ಕುರಿತು ಮತ್ತು ಸೂಕ್ತ ಕ್ರಮ ಕೈಗೊಳ್ಳುವಂತೆ ಆಗ್ರಹಿಸಿ 30 ಸದಸ್ಯರ ಬೆಂಬಲದೊಂದಿಗೆ ಹಾಗೂ ಮೂರು ದೃಢವಾದ ಬೇಡಿಕೆಗಳೊಂದಿಗೆ ಚೇತನ್ ಅಹಿಂಸಾ ಮತ್ತು ಟೀಮ್ ಅಹಿಂಸಾ ವತಿಯಿಂದ ರಾಹುಲ್ ಗಾಂಧಿಗೆ ಪತ್ರ ಬರೆದಿದ್ದಾರೆ.

ಕರ್ನಾಟಕದಲ್ಲಿ ಆಡಳಿತ ಪಕ್ಷ ಮತ್ತು ವಿರೋಧ ಪಕ್ಷಗಳ ಪರಿಸರದ ವಿರೋಧ ನಡೆಯನ್ನ ವಿರೋಧಿಸಿ ಚೇತನ್ ನಟ ಹಾಗೂ ಹೋರಾಟಗಾರ ಮತ್ತು ಟೀಮ್ ಅಹಿಂಸಾ ರಾಹುಲ್ ಗಾಂಧಿಗೆ ಪತ್ರದ ಮೂಲಕ ಮೂರು ಅಂಶದ ಬೇಡಿಕೆಯ ಬಗ್ಗೆ ಮತ್ತು ಹೋರಾಟದ ಬಗ್ಗೆ ಪತ್ರದಲ್ಲಿ ವ್ಯಕ್ತಪಡಿಸಿದ್ದಾರೆ.

ಕರ್ನಾಟಕದ ಚಿಂತನಶೀಲ ನಾಗರಿಕರು ಮತ್ತು ಪರಿಸರ ನ್ಯಾಯದ ಹೋರಾಟಗಾರರಾದ



ನಾವು ಅಂಡಮಾನ್ ಮತ್ತು ನಿಕೋಬಾರ್ ದ್ವೀಪಗಳಲ್ಲಿ ಮೋದಿ ಆಡಳಿತದ ಗ್ರೇಟ್ ನಿಕೋಬಾರ್ ಐಲ್ಯಾಂಡ್ ಪ್ರಾಜೆಕ್ಟ್ ಜಿ ಎನ್ ಐ ಪಿ ಒಡ್ಡಿರುವ ಪರಿಸರ ವಿನಾಶ ಮತ್ತು ಪರಿಸರ

2ನೇ ಪುಟಕ್ಕೆ..


# ಬಳ್ಳಾರಿಯಲ್ಲಿ ಘೋರ ಕೃತ್ಯ: ಸುತ್ತಿಗೆಯಿಂದ ಹೊಡೆದು ತಾಯಿ-ಮಗು ಹತ್ಯೆ; ಪತಿ ಬಂಧನ

ಬಳ್ಳಾರಿ: ಜಿಲ್ಲೆಯ ಆಂಧ್ರಳ್ ಪ್ರದೇಶದಲ್ಲಿ ಕೌಟುಂಬಿಕ ಕಲಹದ ಹಿನ್ನೆಲೆಯಲ್ಲಿ ವ್ಯಕ್ತಿಯೊಬ್ಬ ತನ್ನ ಪತ್ನಿ ಮತ್ತು ಏಳು ತಿಂಗಳ ಮಗಳನ್ನು ಸುತ್ತಿಗೆಯಿಂದ ಹೊಡೆದು ಹತ್ಯೆ ಮಾಡಿರುವ ಕೃತ್ಯ ನಡೆದಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಮೃತರನ್ನು ರಾಜೇಶ್ವರಿ ಮತ್ತು ಅವರ ಏಳು ತಿಂಗಳ ಮಗಳು ಅಶ್ವಿನಿ ಎಂದು ಗುರುತಿಸಲಾಗಿದೆ. ಆರೋಪಿ ಪತಿ ಹೊನ್ನೂರು ಸ್ವಾಮಿ, ಕೃತ್ಯ ಎಸಗಿದ ನಂತರ ಸ್ಥಳದಿಂದ ಪರಾರಿಯಾಗಿದ್ದಾನೆ ಎಂದು ಹೇಳಲಾಗಿದೆ. ಕಳೆದ ಕೆಲವು ದಿನಗಳಿಂದ ಆ ಕುಟುಂಬದಲ್ಲಿ ಜಗಳಗಳು ನಡೆಯುತ್ತಿದ್ದವು. ಗುರುವಾರ ತಡರಾತ್ರಿ ಈ ಜಗಳ ತೀವ್ರಗೊಂಡು, ಆರೋಪಿ ಈ ಭೀಕರ ಕೃತ್ಯ ಎಸಗಿದ್ದಾನೆ ಎಂದು ಪೊಲೀಸರು ತಿಳಿಸಿದ್ದಾರೆ. ಆರೋಪಿ ತನ್ನ ಪತ್ನಿ ಮತ್ತು ಮಗುವಿನ ಮೇಲೆ ಸುತ್ತಿಗೆಯಿಂದ ಹಲ್ಲೆ ನಡೆಸಿದ್ದು, ಇಬ್ಬರೂ ಸ್ಥಳದಲ್ಲೇ ಸಾವಿಗೀಡಾಗಿದ್ದಾರೆ ಎಂದು ಆರೋಪಿಸಲಾಗಿದೆ.

ಘಟನೆ ಬಗ್ಗೆ ಮಾಹಿತಿ ಲಭ್ಯವಾಗುತ್ತಿದ್ದಂತೆಯೇ, ಎಪಿಎಂಸಿ ಪೊಲೀಸ್ ಠಾಣೆ-ಯ ಪೊಲೀಸರು ಸ್ಥಳಕ್ಕೆ ಧಾವಿಸಿ ಪರಿಶೀಲನೆ ನಡೆಸಿದ್ದಾರೆ. ಮೃತದೇಹಗಳನ್ನು ಮರಣೋತ್ತರ ಪರೀಕ್ಷೆಗಾಗಿ ಆಸ್ಪತ್ರೆಗೆ ರವಾನಿಸಲಾಗಿದೆ.



ಈ ಕೊಲೆಗಳ ಹಿಂದಿನ ನಿಖರವಾದ ಉದ್ದೇಶ ಇನ್ನೂ ತಿಳಿದುಬಂದಿಲ್ಲ. ಈ ಸಂಬಂಧ ಪ್ರಕರಣ ದಾಖಲಿಸಲಾಗಿದ್ದು, ತಲೆಮರೆಸಿಕೊಂಡಿರುವ ಆರೋಪಿ ಹೊನ್ನೂರು ಸ್ವಾಮಿಗಾಗಿ ಶೋಧ ಕಾರ್ಯ ಆರಂಭಿಸಲಾಗಿದೆ. ವಿವಿಧ ಆಯಾಮಗಳಲ್ಲಿ ತನಿಖೆ ನಡೆಸುತ್ತಿರುವುದಾಗಿ ಪೊಲೀಸರು ತಿಳಿಸಿದ್ದಾರೆ.

**ಕೌಟುಂಬಿಕ ಕಲಹಕ್ಕೆ ಬಲಿಯಾದ ತಾಯಿ-ಮಗು; ಆರೋಪಿ ಪತಿ ಬಂಧನ**
**ಬಳ್ಳಾರಿಯಲ್ಲಿ ಭೀಕರ ಘಟನೆ: ಪತ್ನಿ, ಏಳು ತಿಂಗಳ ಮಗು ಹತ್ಯೆ ಆರೋಪ**
**ಅಂದ್ರಾಳ್‌ನಲ್ಲಿ ದುರಂತ: ತಾಯಿ-ಮಗು ಸಾವಿನ ಪ್ರಕರಣ, ತನಿಖೆ ಚುರುಕು**

## ಆ.2 ರಂದು ಪೊಲೀಸ್ ಪೇದೆಗಳ ನೇಮಕಾತಿಗಾಗಿ ಪ್ರವೇಶ ಪರೀಕ್ಷೆ: ಪಾರದರ್ಶಕ ಪರೀಕ್ಷೆ ನಡೆಸಲು ಡಿಸಿ ಸೂಚನೆ



ವಿಜಯನಗರ : ಪೊಲೀಸ್ ಪೇದೆ (ಕಾನ್ಸ್ಟೇಬಲ್) ನೇಮಕಾತಿ ಪರೀಕ್ಷೆಯನ್ನು ಯಾವುದೇ ಲೋಪವಿಲ್ಲದೆ ಯಶಸ್ವಿಯಾಗಿಸಲು ಸುಸೂತ್ರ ಹಾಗೂ ಪಾರದರ್ಶಕವಾಗಿ ಪರೀ-ಕ್ಷೆ ನಡೆಸಲು ನಿಯೋಜನೆಗೊಂಡಿರುವ ಇಲಾಖಾ ಅಧಿಕಾರಿಗಳು ಸಮನ್ವಯದಿಂದ ಕಾರ್ಯನಿರ್ವಹಿಸಬೇಕು ಎಂದು ಜಿಲ್ಲಾಧಿಕಾರಿ ಕವಿತಾ ಎಸ್. ಮನ್ನಿಕೇರಿ ಅವರು ಹೇಳಿದರು. ನಗರದ ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಶುಕ್ರವಾರ (ಜುಲೈ 31) ನಡೆದ ಕಾನ್ಸ್ಟೇಬಲ್ ಪರೀಕ್ಷೆಯ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಪರೀಕ್ಷಾ ಕರ್ತವ್ಯದಲ್ಲಿ ನಿರ್ಲಕ್ಷ್ಯ ಅಥವಾ ಕರ್ತವ್ಯಲೋಪ ಕಂಡುಬಂದರೆ ಸಂಬಂಧಪಟ್ಟ ಅಧಿಕಾರಿಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದ ಅವರು, ಆಗಸ್ಟ್ 2ರಂದು ಬೆಳಿಗ್ಗೆ ಸಮಯದಲ್ಲಿ 13 ಕೇಂದ್ರಗಳಲ್ಲಿ 6,098 ಹಾಗೂ ಮಧ್ಯಾಹ್ನ ಸಮಯದಲ್ಲಿ 12 ಪರೀಕ್ಷಾ ಕೇಂದ್ರಗಳಲ್ಲಿ 5,675 ಸೇರಿದಂತೆ ಒಟ್ಟು 11,773 ಅಭ್ಯರ್ಥಿಗಳು ಪರೀಕ್ಷೆ ಬರೆಯಲಿದ್ದಾರೆ.

2ನೇ ಪುಟಕ್ಕೆ..

# ರೈತರ ನೆರವಿಗೆ ಧಾವಿಸಿದ ತಾವರೆಕೆರೆ ಪೊಲೀಸರು

## ಕರ್ತವ್ಯದ ಜೊತೆಗೆ ಮಾನವೀಯತೆ ಮೆರೆದ ಪೊಲೀಸರಿಗೆ ಸಾರ್ವಜನಿಕರ ಭಾರಿ ಮೆಚ್ಚುಗೆ





ಶಿರಾ : ಚಿತ್ರದುರ್ಗದಿಂದ ಬೆಂಗಳೂರಿನತ್ತ ಟೊಮ್ಯಾಟೊ ಸಾಗಿಸುತ್ತಿದ್ದ ಕ್ಯಾಂಟರ್ ವಾಹನ ರಾಷ್ಟ್ರೀಯ ಹೆದ್ದಾರಿ–48ರಲ್ಲಿ ತಾವರೆಕೆರೆ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಗುರುವಾರ ಸಂಜೆ ಸುಮಾರು 8 ಗಂಟೆ ವೇಳೆಗೆ ಅಪಘಾತಕ್ಕೀಡಾಗಿ ಉರುಳಿದ ಪರಿಣಾಮ, ವಾಹನದಲ್ಲಿದ್ದ ಟೊಮ್ಯಾಟೊಗಳು ರಸ್ತೆಯ ಮೇಲೆ ಚೆಲ್ಲಾಪಿಲ್ಲಿಯಾಗಿ ಬಿದ್ದ ಘಟನೆ ನಡೆದಿದೆ.

ಘಟನೆಯ ಮಾಹಿತಿ ತಿಳಿಯುತ್ತಿದ್ದಂತೆಯೇ ತಾವರೆಕೆರೆ ಪೊಲೀಸ್ ಠಾಣೆಯ ಪಿಎಸ್ಐ ಶಿವಕುಮಾರ್ ಅವರ ನೇತೃತ್ವದಲ್ಲಿ ಪೊಲೀಸ್ ಅಧಿಕಾರಿಗಳು ಹಾಗೂ ಸಿಬ್ಬಂದಿ ತಕ್ಷಣ ಸ್ಥಳಕ್ಕೆ ಧಾವಿಸಿ ಪರಿಸ್ಥಿತಿಯನ್ನು ನಿಯಂತ್ರಿಸಿದರು.

ಸ್ಥಳೀಯ ಸಾರ್ವಜನಿಕರ ಸಹಕಾರದೊಂದಿಗೆ ರಸ್ತೆಯ ಮೇಲೆ ಚೆಲ್ಲಾಪಿಲ್ಲಿಯಾಗಿ ಬಿದ್ದಿದ್ದ ಟೊಮ್ಯಾಟೊಗಳನ್ನು ಸಂಗ್ರಹಿಸಿ ಗ್ರೇಟ್‌ಗಳಲ್ಲಿ ತುಂಬುವ ಮೂಲಕ ರೈತರಿಗೆ ನೆರವಾದರು. ಜೊತೆಗೆ ರಾಷ್ಟ್ರೀಯ ಹೆದ್ದಾರಿಯಲ್ಲಿ ವಾಹನ ಸಂಚಾರ–ಕ್ಕೆ ಯಾವುದೇ ಅಡಚಣೆ ಉಂಟಾಗದಂತೆ ತಕ್ಷಣವೇ ಸಂಚಾರವನ್ನು ಸುಗಮಗೊಳಿಸಿ, ಸುರಕ್ಷತೆಗೆ ಅಗತ್ಯ ಕ್ರಮಗಳನ್ನು ಕೈಗೊಂಡರು.

ಪೊಲೀಸರ ಸಮಯಪ್ರಜ್ಞೆ, ಕಾರ್ಯಕ್ಷಮತೆ ಹಾಗೂ ಮಾನವೀಯ ಸೇವೆಯಿಂದ ರೈತರಿಗೆ ಆಗಬಹುದಾಗಿದ್ದ ಲಕ್ಷಾಂತರ ರೂಪಾಯಿ ನಷ್ಟವನ್ನು ಕಡಿಮೆ ಮಾಡಲು ಸಾಧ್ಯವಾಯಿತು. ಈ ಮಾನವೀಯ ಕಾರ್ಯಕ್ಕೆ ರೈತರು ಹಾಗೂ ಸಾರ್ವಜನಿಕರು ವ್ಯಾಪಕ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

ಕರ್ತವ್ಯದ ಜೊತೆಗೆ ಮಾನವೀಯತೆಯನ್ನೂ ಮೆರೆದ ತಾವರೆಕೆರೆ ಪೊಲೀಸ್ ಠಾಣೆಯ ಪಿಎಸ್ಐ ಶಿವಕುಮಾರ್ ಹಾಗೂ ಪೊಲೀಸ್ ಸಿಬ್ಬಂದಿಯ ಕಾರ್ಯ ಸಾರ್ವಜನಿಕರ ಪ್ರಶಂಸೆಗೆ ಪಾತ್ರವಾಗಿದ್ದು, ಸಂಕಷ್ಟದ ಸಂದರ್ಭದಲ್ಲಿ ಪೊಲೀಸರು ನೀಡಿದ ನೆರವು ಎಲ್ಲರ ಮೆಚ್ಚುಗೆಗೆ ಕಾರಣವಾಗಿದೆ.

# ಸಿ ರಘು ಭೀಮ್ ಆರ್ಮಿ ಕರ್ನಾಟಕ ರಾಜ್ಯಾಧ್ಯಕ್ಷ



ಬಳ್ಳಾರಿ : ಭೀಮ್ ಆರ್ಮಿ ಭಾರತ್ ಎಕ್ತಾ ಮಿಷನ್‌ನ ರಾಷ್ಟ್ರೀಯ ಅಧ್ಯಕ್ಷ ವಿನಯ್ ರತನ್ ಸಿಂಗ್ ಅವರು ಕರ್ನಾಟಕ ರಾಜ್ಯಾಧ್ಯಕ್ಷರಾಗಿ ಸಿ. ರಘು ಅವರನ್ನು ನೇಮಕ ಮಾಡಿ, ಉತ್ತರ ಪ್ರದೇಶದ ಸಹಾರನ್‌ಪುರದಲ್ಲಿ ನಡೆದ ಕಾರ್ಯಕ್ರಮದಲ್ಲಿ ಅಧಿಕೃತ ನೇಮಕಾತಿ ಆದೇಶ ಪತ್ರವನ್ನು ನೀಡಿದರು.ಈ ಹಿನ್ನೆಲೆಯಲ್ಲಿ ಬಳ್ಳಾರಿ ನಗರದ ಮರ್ಚೆಡ್ ಹೋಟೆಲ್‌ನಲ್ಲಿ ಭೀಮ್ ಆರ್ಮಿ ಕಾರ್ಯಕರ್ತರು ಮತ್ತು ಅವರ ಸ್ನೇಹಿತರು ನೂತನ ರಾಜ್ಯಾಧ್ಯಕ್ಷ ಸಿ. ರಘು ಅವರನ್ನು ಸನ್ಮಾನಿಸಿ ಅಭಿನಂದಿಸಿದರು.

ಸನ್ಮಾನ ಸ್ವೀಕರಿಸಿ ಮಾತನಾಡಿದ ಸಿ. ರಘು, ರಾಜ್ಯದಲ್ಲಿ ಭೀಮ್ ಆರ್ಮಿ ಸಂಘಟನೆಯನ್ನು ಮತ್ತಷ್ಟು ಬಲಪಡಿಸಲು ಶ್ರಮಿಸುತ್ತೇನೆ ಮತ್ತು ಸಮಾಜದ ದುರ್ಬಲ ವರ್ಗದ ಜನರಿಗೆ ಮತ್ತು ಶೋಷಿತ ಸಮುದಾಯದ ದಲಿತ ಹಾಗೂ ಹಿಂದುಳಿದ ವರ್ಗಗಳ ಹಕ್ಕುಗಳ ರಕ್ಷಣೆಗಾಗಿ ಸಂಘಟನೆಯನ್ನು ಗ್ರಾಮ ಮಟ್ಟದಿಂದ ರಾಜ್ಯ ಮಟ್ಟದವರೆಗೆ ವಿಸ್ತರಿಸಿ, ಯುವಜನರನ್ನು ಹೆಚ್ಚಿನ ಸಂಖ್ಯೆಯಲ್ಲಿ ಸಂಘಟನೆಗೆ ಸೇರ್ಪಡೆಗೊಳಿಸುವ ಗುರಿ ಹೊಂದಿರುವುದಾಗಿ ತಿಳಿಸಿದರು.

ಈ ಸಂದರ್ಭದಲ್ಲಿ ಮಾರ್ಗದರ್ಶಕ ಗುರುಗಳಾದ ಅಬ್ದುಲ್ ಹೈ ತೋರಗಲ್ಲು, ಶೇಖರ್, ಟಿಪ್ಪು ನವಾಜ್, ಕೇದರ, ನಯಾಜ್ ಅಹಮದ್, ರವಿಚಂದ್ರ, ಸುಂದರೇಶ, ಹಿಪ್ತೇಕರ ಅಹಮದ್, ವಿನೋದ್, ರಾಜಶೇಖರ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ತುಂಗಭದ್ರ ಡ್ಯಾಮ್‌ನಲ್ಲಿ 40 ಟಿ.ಎಂ.ಸಿ. ನೀರು ಸಂಗ್ರಹ

## ಕೃಷಿ ಚಟುವಟಿಕೆಗೆ ನೀರು ಬಿಡಿ ; ಸಂಗನಕಲ್ಲು ಕೃಷ್ಣಪ್ಪ ಮನವಿ



ಬಳ್ಳಾರಿ : ಬಳ್ಳಾರಿ, ವಿಜಯನಗರ ಕೊಪ್ಪಳ ರಾಯಚೂರು ಹಾಗೂ ನೆರೆಯ ಆಂಧ್ರಪ್ರದೇಶದ ಮೂರು ಜಿಲ್ಲೆಗಳ ಜೀವನಾಡಿ ಆದ ತುಂಗಭದ್ರಾ ಜಲಾಶಯದಲ್ಲಿ ಈಗಾಗಲೇ 40 ಟಿಎಂಸಿ ಎಷ್ಟು ನೀರು ಸಂಗ್ರಹ ಗೊಂಡಿದ್ದು ಆದಷ್ಟು ಬೇಗನೆ ಕಾಲುವೆಗಳ ಮೂಲಕ ರೈತರ ಕೃಷಿ ಚಟುವಟಿಕೆಗೆ ಅನುಕೂಲವಾಗುವಂತೆ ನೀರನ್ನು ಬಿಡಬೇಕೆಂದು ಕರ್ನಾಟಕ ರೈತ ಸಂಘ ಹಾಗೂ ಹಸಿರು ಸೇನೆಯ ಜಿಲ್ಲಾಧ್ಯಕ್ಷ ಕೃಷ್ಣಪ್ಪ ಸಂಗನಕಲ್ಲು ಮನವಿ ಮಾಡಿದರು.

ಅವರು ಇಂದು ನಗರದ ಜಿಲ್ಲಾಧಿಕಾರಿ ಕಚೇರಿಯ ಸ್ಥಾನಿಕ ಅಧಿಕಾರಿಗಳಿಗೆ ಮನವಿ ಪತ್ರವನ್ನು ನೀಡಿ ಜಿಲ್ಲೆಯ ರೈತರು ನರ್ಸರಿಯಲ್ಲಿ ಹಾಕಿರುವಂತಹ ಬೀಜ ಬೆಳೆಸೋಕೆ ಎಕರೆಗೆ ರೂ.20 ಸಾವಿರ ಮೆಣಸಿನ ಸಸಿ ಬೆಳೆಸುವುದಕ್ಕೆ ರೈತರಿಗೆ ಕೋಟಿ ಗಟ್ಟಲೆ ಬಂಡವಾಳ ಹೂಡಿದ್ದಾರೆ ಮಳೆ ನೀರು ಇಲ್ಲದೆ ಇತ್ತ ಡ್ಯಾಮ್ ನೀರು ಇಲ್ಲದೆ ಬೆಳೆಗಳು ಒಣಗಿ ಹೋಗಿ ಜಲಾನಯನ ಪ್ರದೇಶದ ರೈತರಿಗೆ ಕೋಟ್ಯಾಂತರ ರೂಪಾಯಿ ನಷ್ಟ ಆಗುತ್ತಿದೆ.

ಮತ್ತು ಈ ಜಲಾಶಯವನ್ನು ನಂಬಿಕೊಂಡು ರೈತರು ಕೃಷಿಕೂಲಿ ಕಾರ್ಮಿಕರು ಬದುಕುತ್ತಾರೆ. ಆಗಸ್ಟ್ ಹತ್ತರ ಒಳಗೆ ಕಾಲುವೆಗೆ ನೀರು ಬಿಟ್ಟರೆ ರೈತರಿಗೆ ಅನುಕೂಲವಾಗಲಿದೆ ಇಲ್ಲವಾದಲ್ಲಿ ರೈತರು ಬೀಜ ಗೊಬ್ಬರ ಮತ್ತು ಇತರ ಚಟುವಟಿಕೆಗೆ ಮಾಡಿದ ಸಾಲದಿಂದ ಕಂಗಾಲಾಗಿ ಆತ್ಮಹತ್ಯೆ ಮಾಡಿಕೊಳ್ಳುವ ಪರಿಸ್ಥಿತಿ ಬರುತ್ತದೆ.

ಹಿಂದಿನ ವರದಿ ಪ್ರಕಾರ 2015ರಲ್ಲಿ 35 ಟಿ.ಎಂ.ಸಿ. ಇದ್ದಾಗ ಕಾಲುವೆಗೆ ನೀರು ಬಿಟ್ಟಿರುತ್ತಾರೆ. ಈಗ 40 ಟಿ.ಎಂ.ಸಿ. ನೀರು ಡ್ಯಾಂ ನಲ್ಲಿ ಇದೆ ಆದ್ದ–ರಿಂದ ಆಗಸ್ಟ್ 10ನೇ ತಾರೀಖಿನೊಳಗೇ ನೀರು ಬಿಡಬೇಕೆಂದು ಕೇಳಿಕೊಳ್ಳುತ್ತೇವೆ.

ನಮ್ಮ ಈ ಮನವಿಯನ್ನು ಜಿಲ್ಲಾಧಿಕಾರಿಗಳು ಮುಖ್ಯಮಂತ್ರಿಗಳು ಗಮನ ತಂದು ಕಾಲುವೆಗೆ ನೀರು ಬಿಡಲು ಕ್ರಮ ಕೈಗೊಳ್ಳಬೇಕು, ಮತ್ತು ರೈತ ಸಂಘದಿಂದ ಬಳ್ಳಾರಿ ಜಿಲ್ಲೆಯ ಎಲ್ಲಾ ಶಾಸಕರಿಗೆ ಸಹ ನಾವು ಈ ಮೂಲಕ ಮನವಿ ಮಾಡಿಕೊಳ್ಳುತ್ತಿದ್ದೇವೆ ಎಂದರು.

ಈ ಸಂದರ್ಭದಲ್ಲಿ ತಿಮ್ಮಪ್ಪ, ಬೈಲೂರು ಈರೇಶ, ಚಲುವಾದಿ ಬುಚ್ಚಪ್ಪ ಸೇರಿದಂತೆ ಇತರರಿದ್ದರು.

# ಹೊನ್ನಾಳಿಯಲ್ಲಿ ಬಂಜೆತನ ನಿವಾರಣಾ ಸಮಾಲೋಚನ ಶಿಬಿರ ಆಯೋಜನೆ




ಹೊನ್ನಾಳಿ : 'ಐ.ವಿ.ಎಫ್ ವೈದ್ಯಕೀಯ ತಂತ್ರಜ್ಞಾನ ಬಂದು ಅಂದಾಜು 40 ವರ್ಷಗಳಾಗಿದ್ದು, 10 ವರ್ಷಗಳಿಂದಲೂ ಬಂಜೆತನ ನಿವಾರಣೆಗಾಗಿ ಚಿಕಿತ್ಸೆ ನಡೆಸಿಕೊಂಡು ಬರಲಾಗುತ್ತಿದೆ' ಎಂದು ದಾವಣಗೆರೆಯ ಕಡ್ಲಿ ಐ.ವಿ.ಎಫ್ ಸೆಂಟರ್‌ನ ತಜ್ಞ ವೈದ್ಯರಾದ ವರದಕಿರಣ್ ಹೇಳಿದರು.

ಪಟ್ಟಣದ ಸಾರ್ವಜನಿಕ ಆಸ್ಪತ್ರೆಯಲ್ಲಿ ಕದಳಿ ಮಹಿಳಾ ವೇದಿಕೆ, ಕಡ್ಲಿ ಐ.ವಿ.ಎಫ್ ಸೆಂಟರ್ ದಾವಣಗೆರೆ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಂಡಿದ್ದ ಬಂಜೆತನ ನಿವಾರಣಾ ಉಚಿತ ಸಮಾಲೋಚನಾ ಶಿಬಿರವನ್ನು ಉದ್ಘಾಟಿಸಿ ಮಾತನಾಡಿದರು.

'ಜೀವನ ಶೈಲಿಯಲ್ಲಿನ ಬದಲಾವಣೆಗಳಿಂದ ಬಂಜೆತನ ಕಾಡುತ್ತದೆ. ಇದರಿಂದ ಮಕ್ಕಳಿಲ್ಲದ ಮಹಿಳೆಯರು ಧೃತಿಗೆಡದೆ ಆಸ್ಪತ್ರೆಗೆ ಬಂದು ಸೂಕ್ತ ಚಿಕಿತ್ಸೆ ಪಡೆದರೆ ಎಲ್ಲರಂತೆ ತಾವೂ ಮಗುವನ್ನು ಪಡೆಯಬಹುದಾಗಿದೆ' ಎಂದರು.

'ಬಂಜೆತನ ನಿವಾರಣೆಗಾಗಿ ಅನೇಕ ವೈದ್ಯಕೀಯ ಚಿಕಿತ್ಸಾ ವಿಧಾನಗಳು ಲಭ್ಯ ಇವೆ. ಅದನ್ನು ಬಳಸಿಕೊಂಡು ನೆಮ್ಮದಿಯ ಜೀವನ ಸಾಗಿಸಬಹುದು' ಎಂದು ಡಿಸಿಸಿ ಬ್ಯಾಂಕ್ ನಿರ್ದೇಶಕ ಡಿ.ಜಿ. ಸುರೇಂದ್ರ ತಿಳಿಸಿದರು.

ಕದಳಿ ಮಹಿಳಾ ವೇದಿಕೆಯ ತಾಲ್ಲೂಕು ಘಟಕದ ಅಧ್ಯಕ್ಷೆ ಪ್ರತಿಮಾ ನಿಜಗುಣ ಶಿವಯೋಗಿ ಅಧ್ಯಕ್ಷತೆ ವಹಿಸಿದ್ದರು.

ಆಸ್ಪತ್ರೆಯ ಆಡಳಿತ ವೈದ್ಯಾಧಿಕಾರಿ ನಂದಕುಮಾರ್, ಆಸ್ಪತ್ರೆಯ ಶುಶ್ರೂಕ ಅಧೀಕ್ಷಕಿ ಅನ್ನಪೂರ್ಣ, ಸ್ತ್ರೀ ರೋಗತಜ್ಞೆ ಡಾ. ಲಕ್ಷ್ಮಿ ಅವರು ಮಾತನಾಡಿದರು.

ಒಂದನೇ ಪುಟದಿಂದ..

# ರಾಜ್ಯದ ಮೂರು ಪ್ರಮುಖ ಸಮಸ್ಯೆಗಳ ಕುರಿತು ರಾಹುಲ್‌ಗೆ ಪತ್ರ

ಅಪಾಯಗಳ ಬಗ್ಗೆ ನಿಮ್ಮ ವಿರೋಧವನ್ನು ಗುರುತಿಸಿ ಗೌರವಿಸುವ ಮೂಲಕ ಸೂಕ್ಷ್ಮ ಪರಿಸರ ವ್ಯವಸ್ಥೆಗಳು ಮತ್ತು ಮೂಲ ನಿವಾಸಿ ಸಮುದಾಯಗಳ ಪರವಾಗಿ ಧ್ವನಿ ಎತ್ತುವುದು ಹಾಗೂ ಸರಿಪಡಿಸಲಾಗದ ಹಾನಿಯನ್ನು ಉಂಟುಮಾಡುವ ನಿರ್ಧಾರಗಳನ್ನು ಪ್ರಶ್ನಿಸುವುದು ಯಾವುದೇ ಸಾರ್ವಜನಿಕ ನಾಯಕನ ಪ್ರಮುಖ ಜವಾಬ್ದಾರಿಯಾಗಿದೆ ಅಂಡಮಾನ್ ಮತ್ತು ನಿಕೋಬಾರ್ ದ್ವೀಪಗಳಲ್ಲಿನ ಪರಿಸರ ವಿನಾಶವು ರಾಷ್ಟ್ರೀಯ ಆಕ್ರೋಶಕ್ಕೆ ಅರ್ಹವಾಗಿದ್ದರೆ ಅದೇ ನೈತಿಕ ಮಾನದಂಡವು ನಿಮ್ಮದೇ ಪಕ್ಷದ ಆಡಳಿತವಿರುವ ರಾಜ್ಯಗಳನ್ನು ಒಳಗೊಂಡಂತೆ ಎಲ್ಲೆಡೆಯೂ ಅನ್ವಯಿಸಬೇಕು ಅದಕ್ಕಾಗಿಯೇ ಕರ್ನಾಟಕದ ಪರಿಸರ ಬಿಕ್ಕಟ್ಟುಗಳ ಬಗ್ಗೆ ನಿಮ್ಮ ಮೌನವನ್ನು ಅರ್ಥ ಮಾಡಿಕೊಳ್ಳುವುದು ನಮಗೆ ಅತ್ಯಂತ ಕಷ್ಟಕರವಾಗಿದೆ ಮೂರು ವರ್ಷಗಳಿಗೂ ಹೆಚ್ಚು ಕಾಲದಿಂದ ಕರ್ನಾಟಕದ ಕಾಂಗ್ರೆಸ್ ಸರ್ಕಾರವು ಅರಣ್ಯಗಳು ನದಿಗಳು ಜೀವ ವೈವಿಧ್ಯತೆ ಮತ್ತು ಸ್ಥಳೀಯ ಸಮುದಾಯಗಳನ್ನ ರಕ್ಷಿಸುವ ಅಧಿಕಾರವನ್ನು ಹೊಂದಿದೆ ಆದರೆ ಬದಲಾಗಿ ನಿಮ್ಮ ಪಕ್ಷದ ನಾಯಕತ್ವದ ಬೆಂಬಲದೊಂದಿಗೆ ಪರಿಸರಕ್ಕೆ ಸಂಬಂಧಿಸಿದ ಹಲವು ವಿವಾದಾತ್ಮಕ ಯೋಜನೆಗಳು ನಿರಂತರವಾಗಿ ಮುಂದುವರೆಯುತ್ತವೆ.

ಪ್ರಾಸ್ತಾವಿಕ ಮೇಕೆದಾಟು ಆಣೆಕಟ್ಟು ಎಂದು ಕರ್ನಾಟಕದ ಎದುರಿಸುತ್ತಿರುವ ಅತ್ಯಂತ ದೊಡ್ಡ ಪರಿಸರ ಬೇಡಿಕೆಯಲ್ಲಿ ಒಂದಾಗಿದೆ ಈ ಯೋಜನೆಯು ಕಾವೇರಿ ವನ್ಯಜೀವಿ ಅಭಯಾರಣ್ಯ ದೊಡ್ಡ ಭಾಗಗಳು ಮತ್ತು 5 ಹಳ್ಳಿಗಳು ಸೇರಿದಂತೆ ಸುಮಾರು 12350 ಎಕರೆ ಭೂಮಿಯನ್ನು ಮುಳುಗಿಸುತ್ತದೆ ಇದು ಆನೆ ಕಾರಿಡಾರ್ ಗಳು ಸೇರಿದಂತೆ ವನ್ಯಜೀವಿಗಳ ಆವಾಸಸ್ಥಾನ ಗಳು ಮತ್ತು ಸಂಚಾರ ಮಾರ್ಗಗಳಿಗೆ ಬೆದರಿಕೆ ಹೊರಡುತ್ತಿದೆ ಹಾಗೂ ದಕ್ಷಿಣ ಭಾರತದ ಅತ್ಯಂತ ಪರಿಸರ ಪ್ರಾಮುಖ್ಯತೆ ಪಡೆದ ನದಿಗಳು ವ್ಯವಸ್ಥೆಗಳಲ್ಲಿ ಒಂದನ್ನು ಶಾಶ್ವತವಾಗಿ ಬದಲಾಯಿಸುತ್ತದೆ ಭಾರತದ ಬೃಹತ್ ಮೂಲಸೌಕರ್ಯ ಯೋಜನೆಗಳು ಸಾಮಾನ್ಯವಾಗಿ ಸಂಭವಿಸುವಂತೆ ಇದರ ಅಂದಾಜು ವೆಚ್ಚವು ಈಗಾಗಲೇ ಸುಮಾರು 9000 ದಿಂದ 14000 ಕೋಟಿಗಳಿಗೆ ಏರಿಕೆಯಾಗಿದೆ ಇದು ಇನ್ನಷ್ಟು ಹೆಚ್ಚಾಗುವ ಎಲ್ಲಾ ಸಾಧ್ಯತೆಗಳು ಇವೆ.

ಆದರೂ ಇದರಿಂದ ಪರಿಸರಕ್ಕಾಗಿರುವ ನಷ್ಟವು ಸರಿ ಪಡಿಸಲಾಗದಂತಾಗಿದೆ ಈ ಯೋಜನೆಯ ಬೆಂಗಳೂರಿನ ನೀರಿನ ಅಗತ್ಯಗಳಿಗೆ ಅತ್ಯಂತ ಪರಿಣಾಮಕಾರಿಯಾದ ದೀರ್ಘಕಾಲನ ಪರಿಹಾರವೇ ಎಂಬುದನ್ನ ವಿಮರ್ಶಕರು ಸಹ ಪ್ರಶ್ನಿಸುತ್ತಿದ್ದಾರೆ?ಇದು ಇಂತಹ ಬೃಹತ್ ಪರಿಸರದ ಬಲಿದಾನವನ್ನು ಸಮರ್ಥಿಸಿಕೊಳ್ಳುವುದು ಮತ್ತಷ್ಟು ಕಷ್ಟಕರವಾಗಿಸುತ್ತದೆ ನದಿ ಎಂದರೆ ಕೇವಲ ಆಣೆಕಟ್ಟು ಕಟ್ಟಿಸಿ ಕೊಳ್ಳಲು ಕಾಯುತ್ತಿರುವ ಜಲಾಶಯವಲ್ಲ ಅದೊಂದು ಜೀವಂತ ವ್ಯವಸ್ಥೆಯಾಗಿದೆ.

ಈ ಸಂದರ್ಭದಲ್ಲಿ ಯಲ್ಲಪ್ಪ ರೆಡ್ಡಿ (ಹಿರಿಯ ಪರಿಸರವಾದಿ) ನಾಗೇಶ್ ಹೆಗಡೆ (ಪರಿಸರವಾದಿ) ಭೇಟಿ ಲಲಿತ ನಾಯಕ್ (ಲೇಖಕಿ ಹಾಗೂ ಹೋರಾಟಗಾರ್ತಿ) ಕವಿತಾ ಲಂಕೇಶ್ (ನಿರ್ದೇಶಕಿ) ಶಿವರಾಮೇಗೌಡ (ಕರವೇ ಸಂಘಟನೆಯ ನಾಯಕ) ನೀತು ಶೆಟ್ಟಿ (ಚಲನಚಿತ್ರ ನಟಿ) ಪುಟ್ಟನಂಜಯ ದೇವನೂರು (ರಾಜಕಾರಣಿ ಪರಿಸರ ಹೋರಾಟಗಾರ) ಪಾಂಡುರಂಗ ಹೆಗಡೆ (ಅಪ್ಪಿಕೋ ಚಳುವಳಿ), ಜ್ಞಾನ ಮಧು (ಪ್ರಾದೇಶಿಕ ಹೋರಾಟಗಾರ)

ರಾ.ಚಿಂತನ್ (ಪತ್ರಕರ್ತ) ತೇಜಸ್ ಆರ್ ಎಸ್ (ಸಂರಕ್ಷಕ ಮತ್ತು ಪತ್ರಕರ್ತ) ದಿಶಾ ಎ ರವಿ (ಪರಿಸರವಾದಿ )ನಾಗಣ್ಣ ಗೌಡ (ಪ್ರಾದೇಶಿಕ ಹೋರಾಟಗಾರ) ಸಹದೇವ್ ಎಸ್ ಹೆಚ್ (ಪರಿಸರವಾದಿ) ರಾಜಾರಾಮನ್ (ಪತ್ರಕರ್ತ) ಮತ್ತು ಸಂಶೋಧಕ ಕೃಷ್ಣಯ್ಯ (ಬುಡಕಟ್ಟು ಸಂಘಟನೆಯ ನಾಯಕ) ದೇವಿ ಕುಮಾರ್ (ಬಿಕೆಎಸ್ ಸಂಘಟನೆಯ ನಾಯಕ) ಶಿವಕುಮಾರ್ (ಕನ್ನಡ ವಿದ್ವಾಂಸರು) ನಾಗಣ್ಣ ಜಿಕೆ (ಹೋರಾಟಗಾರ) ಅನುಭಾಗ್ಯ (ಸಮಾಜ ಸೇವಕಿ ಮತ್ತು ಲೇಖಕಿ) ಮಲ್ಲು ಕುಂಬಾರ್ (ಲಿಂಗತ್ವ ಅಲ್ಪಸಂಖ್ಯಾತ ಹೋರಾಟಗಾರ) ವೀರ ಸಂಗಯ್ಯ (ರೈತ ಮುಖಂಡ) ಶಿವು (ಬುಡಕಟ್ಟು ನಾಯಕ) ರಜಿನಿ ಸಿಜೆ ರಾವ್ (ಪರಿಸರವಾದಿ) ಅಕ್ಷತಾ ಕೊಡಗಳವಾಡಿ (ಸಮಾಜ ಸೇವಕಿ) ಮಧು ಒಲೆಯಾರ್ (ಹೋರಾಟಗಾರರು) ಕಿರಣ್ ಶ್ರೀನಿವಾಸ್ (ಚಲನಚಿತ್ರ ನಟ) ಕೆಎಸ್ ಜಗದೀಶ್ (ವಕೀಲ ಹಾಗೂ ಹೋರಾಟಗಾರ) ಚೇತನ್ ಅಹಿಂಸಾ (ನಟ ಮತ್ತು ಹೋರಾಟಗಾರ) ಇದ್ದರು

# ಆ.2 ರಂದು ಪೊಲೀಸ್ ಪೇದೆಗಳ ನೇಮಕಾತಿಗಾಗಿ ಪ್ರವೇಶ ಪರೀಕ್ಷೆ:

## ಪಾರದರ್ಶಕವಾಗಿ ಪರೀಕ್ಷೆ ನಡೆಸಲು ಡಿಸಿ ಸೂಚನೆ

ಮಾರ್ಗಾಧಿಕಾರಿಗಳು ಸರಿಯಾದ ಸಮಯಕ್ಕೆ ಪ್ರಶ್ನೆಪತ್ರಿಕೆ ರವಾನೆ ಮಾಡಬೇಕು. ಪರೀಕ್ಷೆ ಮುಕ್ತಾಯವಾದ ನಂತರ ಉತ್ತರ ಪತ್ರಿಕೆಗಳನ್ನು ಸುರಕ್ಷಿತವಾಗಿ ಜಿಲ್ಲಾ ಖಜಾನೆಗೆ ತಲುಪಿಸಬೇಕು ಎಂದು ಸಂಬಂಧಪಟ್ಟ ಅಧಿಕಾರಿಗಳಿಗೆ ನಿರ್ದೇಶಿಸಿದರು. ಪರೀಕ್ಷಾ ಕೇಂದ್ರಕ್ಕೆ ಬಂದ ಅಭ್ಯರ್ಥಿಗಳ ಪ್ರವೇಶ ಪತ್ರ ಹಾಗೂ ಗುರುತಿನ ಚೀಟಿಯಲ್ಲಿರುವ ಹೆಸರು ಹೊಂದಾಣಿಕೆಯನ್ನು ಕಡ್ಡಾಯವಾಗಿ ಪರಿಶೀಲಿಸಿದ ನಂತರವೇ ಪರೀಕ್ಷಾ ಕೇಂದ್ರದೊಳಗೆ ಪ್ರವೇಶ ಕಲ್ಪಿಸಬೇಕು.

ಪರೀಕ್ಷಾ ಕೇಂದ್ರಗಳಲ್ಲಿ ಅಭ್ಯರ್ಥಿಗಳಿಗೆ ಅನುಕೂಲವಾಗುವಂತೆ ಗಾಳಿ, ಬೆಳಕಿನ ವ್ಯವಸ್ಥೆ ಮತ್ತು ಕುಡಿಯುವ ನೀರು, ಶೌಚಾಲಯ ವ್ಯವಸ್ಥೆ ಕಲ್ಪಿಸಬೇಕು. ಅಭ್ಯರ್ಥಿಗಳು ನಿಗದಿತ ವಸ್ತ್ರಸಂಹಿತೆಯನ್ನು ಪಾಲಿಸಬೇಕು. ಮೊಬೈಲ್ ಫೋನ್, ಬ್ಲೂಟೂತ್ ಸಾಧನ, ಎಲೆಕ್ಟ್ರಾನಿಕ್ ಪೆನ್, ಕೈಗಡಿಯಾರ, ಬೆಲ್ಟ್ ಸೇರಿದಂತೆ ಯಾವುದೇ ಎಲೆಕ್ಟ್ರಾನಿಕ್ ವಸ್ತುಗಳನ್ನು ಪರೀಕ್ಷಾ ಕೇಂದ್ರಕ್ಕೆ ತರಲು ಅವಕಾಶವಿರುವುದಿಲ್ಲ. ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ನೀಡಿರುವ ಸೂಚನೆ ಮತ್ತು ಮಾರ್ಗಸೂಚಿಗಳನ್ನು ಪ್ರತಿ ಪರೀಕ್ಷಾರ್ಥಿ ಅಭ್ಯರ್ಥಿ ಹಾಗೂ ಪರೀಕ್ಷಾ ಕರ್ತವ್ಯದಲ್ಲಿರುವ ಅಧಿಕಾರಿ ಸಿಬ್ಬಂದಿಗಳು ಕಡ್ಡಾಯವಾಗಿ ಪಾಲಿಸಬೇಕೆಂದು ಅವರು ಹೇಳಿದರು.

# ಸಂಪುಟ ವಿಸ್ತರಣೆಗೆ ಹೈಕಮಾಂಡ್ ಗ್ರೀನ್ ಸಿಗ್ನಲ್:

ಸಿದ್ಧಗೊಂಡಿದೆ ಎಂದು ಮೂಲಗಳು ತಿಳಿಸಿವೆ.

ಸೋಮವಾರ ಸಂಜೆ 5 ಗಂಟೆಗೆ ವಿಧಾನಸೌಧದ ಗ್ಲಾಸ್ ಹೌಸ್‌ನಲ್ಲಿ ನೂತನ ಸಚಿವರ ಪ್ರಮಾಣವಚನ ಸಮಾರಂಭ ನಡೆಸುವ ಸಾಧ್ಯತೆ ಇದೆ. ಪ್ರಸ್ತುತ ಖಾಲಿ ಇರುವ 20 ಸಚಿವ ಸ್ಥಾನಗಳ ಪೈಕಿ 18 ಸ್ಥಾನಗಳನ್ನು ಭರ್ತಿ ಮಾಡುವ ನಿರೀಕ್ಷೆಯಿದ್ದು, ಉಳಿದ ಎರಡು ಸ್ಥಾನಗಳನ್ನು ಮುಂದಿನರಾಜಕೀಯ ಬೆಳವಣಿಗೆಗಳು ಹಾಗೂ ಅಸಮಾಧಾನವನ್ನು ಸಮತೋಲನಗೊಳಿಸುವ ಉದ್ದೇಶದಿಂದ ಖಾಲಿ ಉಳಿಸಬಹುದು ಎಂದು ಹೇಳಲಾಗುತ್ತಿದೆ. ಈ ವಿಸ್ತರಣೆಯಲ್ಲಿ ಇಬ್ಬರು ಮಹಿಳಾ ಶಾಸಕರಿಗೂ ಸಚಿವ ಸ್ಥಾನ ದೊರೆಯುವ ಸಾಧ್ಯತೆ ಇದೆ ಎಂದು ಮೂಲಗಳು ತಿಳಿಸಿವೆ.

ಸಭೆಯ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಎಐಸಿಸಿ ರಾಜ್ಯ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲಾ ಅವರು, ಸಚಿವ ಸಂಪುಟ ವಿಸ್ತರಣೆಯ ದಿನಾಂಕವನ್ನು ಮುಖ್ಯಮಂತ್ರಿ ಹಾಗೂ ಕೆಪಿಸಿಸಿ ಅಧ್ಯಕ್ಷರು ತಿಳಿಸುತ್ತಾರೆ. ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಸಿದ್ದರಾಮಯ್ಯ ಹಾಗೂ ಕೆಪಿಸಿಸಿ ಅಧ್ಯಕ್ಷರು ರಾಜ್ಯದ ಪರಿಸ್ಥಿತಿಯನ್ನು ಗಮನಿಸಲು ಈಗಾಗಲೇ ಬೆಂಗಳೂರಿಗೆ ಮರಳಿದ್ದಾರೆ" ಎಂದರು. ಆದರೆ, ಸಚಿವ ಸ್ಥಾನ ಪಡೆಯುವವರ ಕುರಿತು ಯಾವುದೇ ಮಾಹಿತಿ ನೀಡಲು ಅವರು ನಿರಾಕರಿಸಿದರು.

ಸಚಿವರ ಹೆಸರುಗಳು ಪ್ರಮಾಣವಚನ ನಡೆಯುವವರೆಗೂ ಬಹಿರಂಗವಾಗುವುದಿಲ್ಲ. ಸಚಿವ ಸಂಪುಟ ವಿಸ್ತರಣೆಯ ದಿನಾಂಕವನ್ನು ಮುಖ್ಯಮಂತ್ರಿ ಅಧಿಕೃತವಾಗಿ ಘೋಷಿಸಲಿದ್ದಾರೆ ಎಂದು ತಿಳಿಸಿದ್ದಾರೆ. ಈ ನಡುವೆ ತಮಿಳುನಾಡು ಮುಖ್ಯಮಂತ್ರಿ ಸಿ. ವಿಜಯ್ ಜೋಸೆಫ್ ಅವರು ಸೋಮವಾರ ಬೆಂಗಳೂರಿಗೆ ಬಂದು ಡಿ.ಕೆ. ಶಿವಕುಮಾರ್ ಅವರೊಂದಿಗೆ ಕಾವೇರಿ ನೀರಿನ ವಿಚಾರವಾಗಿ ಮಾತುಕತೆ ನಡೆಸುವ ಕಾರ್ಯಕ್ರಮ ರೈತರ ಪ್ರತಿಭಟನೆಯ ಹಿನ್ನೆಲೆಯಲ್ಲಿ ಅನಿಶ್ಚಿತತೆಯಲ್ಲಿ ಸಿಲುಕಿದೆ.

ಅಗತ್ಯವಿದ್ದರೆ ಉಭಯ ಮುಖ್ಯಮಂತ್ರಿಗಳು ವರ್ಚುವಲ್ ಮೂಲಕ ಸಭೆ ನಡೆಸುವ ಸಾಧ್ಯತೆ–ಯೂ ಇದೆ ಎಂದು ಮೂಲಗಳು ತಿಳಿಸಿವೆ.

# ರಾಯಲ್ ಫೋರ್ಟ್ ಹೋಟೆಲ್‌ನಲ್ಲಿ ಮೂರು ದಿನಗಳ

# ವೇಗೋ ಅಂಡ್ ಸ್ಟೈಲ್ ಎಕ್ಸಿಬಿಷನ್ ಆರಂಭ : ರವಿ ಆರೋರ

ಬಳ್ಳಾರಿ ; ನಗರದ ರಾಯಲ್ ಪೋರ್ಟ್ ಹೋಟೆಲ್ ನಲ್ಲಿ ಜುಲೈ 31 ಆಗಸ್ಟ್ 1 ಮತ್ತು 2 ರಂದು ಮೂರು ದಿನಗಳ ಕಾಲ ವೇಗೋ ಅಂಡ್ ಸ್ಟೈಲ್ ಎಕ್ಸಿಬಿಷನ್ ಆರಂಭಿಸಲಾಗಿದೆ,, ಈ ಬಾರಿಯ ಎಕ್ಸಿಬಿಷನ್ ನಲ್ಲಿ ಬೆಳ್ಳಿ ಬಂಗಾರದ ಆಭರಣಗಳು ಹಾಗೂ ದಕ್ಷಿಣ ಭಾರತದ ವಿಶೇಷ ಉಡುಪುಗಾಳಾದ ವಿವಿಧ ಕಂಪನಿಯ ಬ್ರಾಂಡೆಡ್ ಸೀರೆಗಳು ಯುವತಿಯರ ಅಚ್ಚುಮೆಚ್ಚಿನ ಕುರ್ತಿ ಗಳು ಮತ್ತು ಎಲ್ಲರೂ ಮೆಚ್ಚುವಂತ ಡ್ರೆಸ್ ಮೆಟೀರಿಯಲ್ ಈ ಬಾರಿಯ ಪ್ರದರ್ಶನದಲ್ಲಿ ಇಡಲಾಗಿದೆ ಮಹಿಳೆಯರು ನಮ್ಮ ಈ ಪ್ರದರ್ಶನ ಮತ್ತು ಮಾರಾಟರ ಮಳಿಗೆಗೆ ಈ ಮೂರು ದಿನಗಳಲ್ಲಿ ಒಮ್ಮೆ ಭೇಟಿ ನೀಡಿ ತಮಗೆ ಇಷ್ಟವಾದ ಬಂಗಾರ ಮತ್ತು ಬೆಳ್ಳಿಯ ಆಭರಣಗಳನ್ನು ವಿಶೇಷವಾದ ಬೆಲೆಯಲ್ಲಿ ಖರೀದಿಸಬಹುದು ಎಂದು ಬಳ್ಳಾರಿ ನಾಗರಿಕರಲ್ಲಿ ಮನವಿ ಮಾಡಿದ್ದಾರೆ.

ಹಾಗೂ ತಮ್ಮ ಮನೆಗೆ ಸರಿಹೊಂದುವಂತ ಅಂದ ಮತ್ತು ಚಂದವಾದ ಕೇರಳ ಸ್ಟೈಲ್ ಫರ್ನಿಚರ್, ರಾಯಲ್ ಓಕ್ ಫರ್ನಿಚರ್ ಸೇರಿದಂತೆ ಹಲವಾರು ಕಂಪನಿಗಳ ವಿವಿಧ ಬಗೆಯ ವಿಶೇಷವಾದ ವಿಶೇಷವಾದ ಪೀಠೋಪಕರಣಗಳನ್ನು ಸಹ ಇಡಲಾಗಿದೆ ತಮ್ಮ ಮನೆಗೆ ಸರಿಹೊಂದುವಂತಹ ವಿವಿಧ ರೀತಿಯ ಫರ್ನಿಚರ್ ಗಳನ್ನು ಸಹ ವಿಶೇಷ ಬೆಲೆಯಲ್ಲಿ ಖರೀದಿಸುವ ಅವಕಾಶವನ್ನು ಕಲ್ಪಿಸಲಾಗಿದೆ , ಬಳ್ಳಾರಿ ಸಾರ್ವಜನಿಕರು ಪ್ರತಿ ಬಾರಿಯಂತೆ ಈ ಬಾರಿಯೂ ಸಹ



ನಮ್ಮ ಪ್ರದರ್ಶನ ಮಳಿಗೆಗೆ ಭೇಟಿಕೊಟ್ಟು ಪ್ರೋತ್ಸಾಹಿಸುತ್ತೀರಿ ಎಂದು ನಾನು ನಂಬುತ್ತೇನೆ ತಪ್ಪದೇ ಬಳ್ಳಾರಿ ನಾಗರಿಕರು ನಮ್ಮ ಮಳಿಗೆಗೆ ಭೇಟಿ ನೀಡಲು ನಾನು ವಿಶೇಷವಾಗಿ ತಮ್ಮಲ್ಲಿ ವಿನಂತಿಸಿಕೊಳ್ಳುತ್ತಿದ್ದೇನೆ ಎಂದು ರವಿ ಆರೋರ ತಿಳಿಸಿದರು. ಪ್ರದರ್ಶನ ಮತ್ತು ಮಾರಾಟ ಮಳಿಗೆಯನ್ನು ಉದ್ಘಾಟಿಸಿದ ಉಜ್ವಲಾ ಶ್ರೀಧರ್ ಅವರು ಮಾತನಾಡಿ, ಮಹಿಳೆಯರಿಗೆ ಅತ್ಯಂತ ಇಷ್ಟವಾದ ಸೀರೆ ಡ್ರೆಸ್ ಮೆಟೀರಿಯಲ್ ಹಾಗೂ ಗೋಲ್ಡ್ ಮತ್ತು ಸಿಲ್ವರ್ ಆರ್ನಮೆಂಟ್ಸ್ ಗಳು ಸ್ಪೆಷಲ್ ಕಲೆಕ್ಷನ್ಸ್ ಈ ಮಳಿಗೆಯಲ್ಲಿದೆ ನಗರದ ಮಹಿಳೆಯಗೆ ಇಷ್ಟವಾಗುವಂತ ಅನೇಕ ವಿಧದ ವಸ್ತುಗಳಿದ್ದು ಈ ಮಾರಾಟ ಮತ್ತು ಪ್ರದರ್ಶನ ಮಳಿಗೆಗೆ ಭೇಟಿ ನೀಡಿ ತಮಗೆ ಇಷ್ಟವಾದ ವಸ್ತುಗಳನ್ನು ಕೊಂಡುಕೊಳ್ಳಬಹುದು ಎಂದರು.

# ಕಬ್ಬಡ್ಡಿ ತರಬೇತುದಾರ ಎ.ಕೆ. ಪರಶುರಾಮರಿಗೆ 'ಬೆಸ್ಟ್ ಕೋಚ್ ಅವಾರ್ಡ್' ರಾಜ್ಯ ಪ್ರಶಸ್ತಿ



ಕೂಡ್ಲಿಗಿ, ಆ. 1: ತಾಲೂಕಿನ ಹೂಡೇಂ ಗ್ರಾಮದ ರಾಷ್ಟ್ರಮಟ್ಟದ ಕಬ್ಬಡ್ಡಿ ಕ್ರೀಡಾಪಟು ಹಾಗೂ ತರಬೇತುದಾರ ಎ.ಕೆ. ಪರಶುರಾಮ ಅವರಿಗೆ ಕ್ರೀಡಾ ಕ್ಷೇತ್ರದಲ್ಲಿನ ವಿಶಿಷ್ಟ ಸೇವೆಯನ್ನು ಗುರುತಿಸಿ 'ಬೆಸ್ಟ್ ಕೋಚ್ ಅವಾರ್ಡ್' ರಾಜ್ಯ ಪ್ರಶಸ್ತಿ ನೀಡಿ ಗೌರವಿಸಲಾಗಿದೆ.

ಹೂವಿನಹಡಗಲಿಯ ಹಾನಗಲ್ ಕುಮಾರೇಶ ಸಭಾಂಗಣದ ಜಿ.ಬಿ.ಆರ್. ಕಾಲೇಜಿನಲ್ಲಿ ಕಾ.ನಿ.ಪ. ಧ್ವನಿ (ರಿ) ವತಿಯಿಂದ ಆಯೋಜಿಸಿದ್ದ ಪತ್ರಿಕಾ ದಿನಾಚರಣೆ ಹಾಗೂ ಸಾಧಕರ ಸನ್ಮಾನ ಕಾರ್ಯಕ್ರಮದಲ್ಲಿ ಪ್ರಶಸ್ತಿ ಪ್ರದಾನ ಮಾಡಲಾಯಿತು.

ಪರಶುರಾಮ ಅವರು 2025ನೇ ಸಾಲಿನಲ್ಲಿ ಸರ್ಕಾರಿ ಶಾಲೆಗಳ ಅಂಡರ್–14 ಹಾಗೂ ಅಂಡರ್–17 ಕಬ್ಬಡ್ಡಿ ತಂಡಗಳಿಗೆ ತರಬೇತಿ ನೀಡಿ, ವಿದ್ಯಾರ್ಥಿಗಳನ್ನು ವಿಭಾಗ ಮತ್ತು ರಾಜ್ಯಮಟ್ಟದ ಸ್ಪರ್ಧೆಗಳಿಗೆ ತಲುಪಿಸುವಲ್ಲಿ ಪ್ರಮುಖ ಪಾತ್ರವಹಿಸಿದ್ದಾರೆ. ಅವರ ನಿಸ್ವಾರ್ಥ ಸೇವೆಯನ್ನು ಪರಿಗಣಿಸಿ ಈ ರಾಜ್ಯ ಪ್ರಶಸ್ತಿ ನೀಡಿ ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಹೂಡೇಂ ಗ್ರಾಮದ ಗ್ರಾಮಸ್ಥರು, ಶಿಕ್ಷಕರು, ಸ್ನೇಹಿತರು, ಹಿತೈಷಿಗಳು ಹಾಗೂ ಕ್ರೀಡಾಭಿಮಾನಿಗಳು ಎ.ಕೆ. ಪರಶುರಾಮ ಅವರನ್ನು ಅಭಿನಂದಿಸಿದರು.

# 28 ಕೋಟಿ ಯುಜಿಡಿ ಕಾಮಗಾರಿ ವಿವಾದ: ಪಾರದರ್ಶಕತೆ ಎಲ್ಲಿದೆ?

## ಮಾಹಿತಿ ಫಲಕ ಇಲ್ಲ, ಅಂದಾಜು ಪಟ್ಟಿ ಕುರಿತು ಪ್ರಶ್ನೆ ಸಾರ್ವಜನಿಕರಿಂದ ತನಿಖೆಗೆ ಆಗ್ರಹ





ನವಲಗುಂದ, ಆ. 1: ನವಲಗುಂದ ಪಟ್ಟಣದಲ್ಲಿ ನಡೆಯುತ್ತಿರುವ ಒಳಚರಂಡಿ (ಯುಜಿಡಿ) ಕಾಮಗಾರಿ ಕುರಿತು ಸಾರ್ವಜನಿಕ ವಲಯದಲ್ಲಿ ಹಲವು ಪ್ರಶ್ನೆಗಳು ಕೇಳಿಬಂದಿದ್ದು, ಕಾಮಗಾರಿಯಲ್ಲಿ ಪಾರದರ್ಶಕತೆ ಕಾಪಾಡಲಾಗಿದೆಯೇ ಎಂಬ ಬಗ್ಗೆ ಅನುಮಾನಗಳು ವ್ಯಕ್ತವಾಗಿವೆ.

ಪಟ್ಟಣದಲ್ಲಿ ಸುಮಾರು 28 ಕೋಟಿ ವೆಚ್ಚದ ಯುಜಿಡಿ ಕಾಮಗಾರಿ ನಡೆ–ಯುತ್ತಿದೆ ಎಂದು ಸ್ಥಳೀಯರು ಹೇಳುತ್ತಿದ್ದು, ಕಾಮಗಾರಿಯ ಗುಣಮಟ್ಟ, ಮಾಹಿತಿ ಬಹಿರಂಗಪಡಿಸುವಿಕೆ ಹಾಗೂ ತಾಂತ್ರಿಕ ನಿರ್ವಹಣೆ ಕುರಿತು ಸಾರ್ವಜನಿಕರು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಸ್ಥಳೀಯರ ಆರೋಪದ ಪ್ರಕಾರ, ಕಾಮಗಾರಿ ನಡೆಯುತ್ತಿರುವ ಸ್ಥಳಗಳಲ್ಲಿ ಸರ್ಕಾರದ ನಿಯಮದಂತೆ ಅಳವಡಿಸಬೇಕಾದ ಮಾಹಿತಿ ಫಲಕಗಳು ಕಾಣಿಸುತ್ತಿಲ್ಲ. ಯೋಜನೆಯ ವೆಚ್ಚ, ಕಾಮಗಾರಿ ಅವಧಿ, ಸಂಬಂಧಪಟ್ಟ ಇಲಾಖೆ, ಗುತ್ತಿಗೆದಾರರ ಹೆಸರು ಹಾಗೂ ತಾಂತ್ರಿಕ ವಿವರಗಳು ಸಾರ್ವಜನಿಕರಿಗೆ ಲಭ್ಯವಾಗದಿರುವುದರಿಂದ ಅನುಮಾನಗಳಿಗೆ ಕಾರಣವಾಗಿದೆ ಎಂದು ಅವರು ದೂರಿದ್ದಾರೆ. ಇನ್ನೊಂದೆಡೆ, ಕಾಮಗಾರಿ ಸ್ಥಳದಲ್ಲಿದ್ದ ಇಂಜಿನಿಯರ್ ಬಳಿ ಯೋಜನೆಯ ಅಂದಾಜು ಪಟ್ಟಿ ಕುರಿತು ಪ್ರಶ್ನಿಸಿದಾಗ ಸಮರ್ಪಕ ಮಾಹಿತಿ ದೊರೆಯಲಿಲ್ಲ ಎಂದು ಸ್ಥಳೀಯರು ಆರೋಪಿಸಿದ್ದಾರೆ. ಸರ್ಕಾರಿ ಕಾಮಗಾರಿಯ ದಾಖಲೆಗಳು ಸಂಬಂಧಿಸಿದ ಅಧಿಕಾರಿಗಳ ಬಳಿ ಲಭ್ಯವಿರಬೇಕು ಎಂಬುದು ಸಾರ್ವಜನಿಕರ ಅಭಿಪ್ರಾಯವಾಗಿದೆ.

ಕೆಲವು ಸ್ಥಳಗಳಲ್ಲಿ ಅಳವಡಿಸಲಾಗುತ್ತಿರುವ ಪೈಪ್‌ಗಳ ಗುಣಮಟ್ಟ ಹಾಗೂ ತಳಪಾಯ ಕಾಮಗಾರಿ ಕುರಿತು ಸಹ ಸಾರ್ವಜನಿಕರು ಪ್ರಶ್ನೆ ಎತ್ತಿದ್ದು, ಕಾಮಗಾರಿಯ ತಾಂತ್ರಿಕ ಗುಣಮಟ್ಟವನ್ನು ಸ್ವತಂತ್ರ ತಜ್ಞರಿಂದ ಪರಿಶೀಲಿಸಬೇಕು ಎಂದು ಆಗ್ರಹಿಸಿದ್ದಾರೆ.

ಈ ಕುರಿತು ಸಂಬಂಧಪಟ್ಟ ಇಲಾಖೆ ಅಥವಾ ಗುತ್ತಿಗೆದಾರರಿಂದ ಅಧಿಕೃತ ಪ್ರತಿಕ್ರಿಯೆ

### ಸಾರ್ವಜನಿಕರ ಪ್ರಮುಖ ಆಗ್ರಹಗಳು

ಯುಜಿಡಿ ಕಾಮಗಾರಿಯ ಸಂಪೂರ್ಣ ವಿವರಗಳನ್ನು ಸಾರ್ವಜನಿಕರಿಗೆ ಬಹಿರಂಗಪಡಿಸಬೇಕು.

ಕಾಮಗಾರಿ ಸ್ಥಳಗಳಲ್ಲಿ ಕಡ್ಡಾಯ ಮಾಹಿತಿ ಫಲಕಗಳನ್ನು ಅಳವಡಿಸಬೇಕು.

ಕಾಮಗಾರಿಯ ಗುಣಮಟ್ಟವನ್ನು ಸ್ವತಂತ್ರ ತಾಂತ್ರಿಕ ತಂಡದಿಂದ ಪರಿಶೀಲಿಸಬೇಕು.

ಯೋಜನೆಯ ವೆಚ್ಚ, ಟೆಂಡರ್ ಪ್ರಕ್ರಿಯೆ ಹಾಗೂ ಕಾಮಗಾರಿಯ ಪ್ರಗತಿ ಕುರಿತು ಸ್ಪಷ್ಟ ಮಾಹಿತಿ ನೀಡಬೇಕು.

ಸಾರ್ವಜನಿಕರ ಅನುಮಾನಗಳನ್ನು ನಿವಾರಿಸಲು ಸಂಬಂಧಪಟ್ಟ ಅಧಿಕಾರಿಗಳು ಸ್ಪಷ್ಟನೆ ನೀಡಬೇಕು.





ಲಭ್ಯವಾಗಿಲ್ಲ. ಸಾರ್ವಜನಿಕರು ಎತ್ತಿರುವ ಪ್ರಶ್ನೆಗಳಿಗೆ ಅಧಿಕಾರಿಗಳು ಸ್ಪಷ್ಟನೆ ನೀಡುವ ಮೂಲಕ ಪಾರದರ್ಶಕತೆ ಕಾಪಾಡಬೇಕೆಂದು ಸ್ಥಳೀಯರು ಒತ್ತಾಯಿಸಿದ್ದಾರೆ. ಆರೋಪಗಳ ಸತ್ಯಾಸತ್ಯತೆಯನ್ನು ಸಂಬಂಧಪಟ್ಟ ಇಲಾಖೆ ಪರಿಶೀಲಿಸಿ ಅಗತ್ಯ ಕ್ರಮ ಕೈಗೊಳ್ಳಬೇಕೆಂಬ ಆಗ್ರಹವೂ ಕೇಳಿಬಂದಿದೆ.

# ಶಾಸಕ ಡಾ. ಮಂತರ್ ಗೌಡ ಅವರಿಂದ 50ಲಕ್ಷ ವೆಚ್ಚದ ತಡೆಗೋಡೆ ಲೋಕಾರ್ಪಣೆ

ಮಡಿಕೇರಿ:ನಗರದ ಜಲಾಶಯ ಬಡಾವಣೆಯ ನಾಗರಿಕರ ಬಹುಕಾಲದ ಕೋರಿ–ಕೆಯಾಗಿದ್ದ 50 ಲಕ್ಷ ರೂ ವೆಚ್ಚದಲ್ಲಿ ನಿರ್ಮಾಣವಾದ ತಡೆಗೋಡೆ ಸೇರಿದಂತೆ ವಿವಿಧ ಬಡಾವಣೆಗಳಲ್ಲಿ ನಿರ್ಮಿಸಿದ ಕಾಮಗಾರಿಗಳನ್ನು ಮಡಿಕೇರಿ ವಿಧಾನ ಸಭಾ ಕ್ಷೇತ್ರದ ಶಾಸಕರಾದ ಡಾ ಮಂತರ್ ಗೌಡರವರು ಲೋಕಾರ್ಪಣೆ ಮಾಡಿದರು. ಗೌಳಿಬೀದಿ ನೂತನ ಕಾಂಕ್ರೀಟ್ ರಸ್ತೆ ಭಗವತಿ ನಗರದ ಮೂಲಕ ಅಬ್ಬಿಫಾಲ್ಸ್ ಗೆ ಹೋಗುವ ಕಾಂಕ್ರೀಟ್ ರಸ್ತೆ ಕಾಮಗಾರಿಗಳನ್ನು ನಾಗರಿಕರ ಸಮ್ಮುಖದಲ್ಲಿ ಉದ್ಘಾಟನೆ ಮಾಡಿದರು.ಮಾನ್ಯ ಮುಖ್ಯಮಂತ್ರಿಗಳು ನೀಡಿದ ವಿಶೇಷ ಅನುದಾನದಲ್ಲಿ 3.5 ಕೋಟಿ ರೂಗಳನ್ನು ಮಡಿಕೇರಿ ನಗರದ ಬಡಾವಣೆಗಳ ಅಭಿವೃದ್ಧಿಗೆ ನೀಡಿ–ದ್ದು ಮುಂದಿನ ದಿನಗಳಲ್ಲಿ ಮತ್ತಷ್ಟು ಅನುದಾನ ಒದಗಿಸಿ ಮಡಿಕೇರಿ ನಗರವನ್ನು ರಾಜ್ಯದಲ್ಲಿಯೇ ಮಾದರಿ ನಗರವನ್ನಾಗಿಸಲು ಪ್ರಯತ್ನ ಪಡುವುದಾಗಿ ಈ ಸಂದರ್ಭದಲ್ಲಿ ಡಾ ಮಂತರ್ ಗೌಡ ಭರವಸೆ ನೀಡಿದರು.

ರಾಜೀವ್ ಗಾಂಧಿ ಪಂಚಾಯತ್ ರಾಜ್ ಸಂಘಟನೆಯ ಜಿಲ್ಲಾಧ್ಯಕ್ಷರಾದ ತೆನ್ನಿರ ಮೈನಾರವರು ಮಾತನಾಡಿ 2018ರ ಪ್ರಕೃತಿ ವಿಕೋಪ ಆದಲ್ಲಿಂದ ಜಲಾಶಯ ಬಡಾವಣೆಯ ನಿವಾಸಿಗಳು ಭೂ ಕುಸಿತದ ಆತಂಕದಿಂದಲೇ ಇದ್ದು ತಮ್ಮ ಬಡಾವಣೆ ರಕ್ಷಣೆಗೆ ಮನವಿ ಸಲ್ಲಿಸುತ್ತಲೇ ಬಂದಿದ್ದರು.ದೊಡ್ಡ ಮೊತ್ತದ ಕಾಮಗಾರಿಯಾದ್ದರಿಂದ ಸಮಸ್ಯೆಗೆ ಪರಿಹಾರ ಸಿಕ್ಕಿರಲಿಲ್ಲ.ಕಳೆದ ವರ್ಷ ಮಳೆಗಾಲದಲ್ಲಿ ಸದರಿ ಅಪಾಯಕಾರಿ ಪ್ರದೇಶವನ್ನು ವೀಕ್ಷಿಸಿದ ಶಾಸಕರು ಅನುದಾನದ ಭರವಸೆ ನೀಡಿದ್ದರು. ಈಗ 50 ಲಕ್ಷ ರೂ ವೆಚ್ಚದಲ್ಲಿ ತಡೆಗೋಡೆ ಕಾಮಗಾರಿ ಪೂರ್ಣಗೊಳಿಸಿ ಬಡಾವಣೆ ನಿವಾಸಿಗಳು ನಿರಾಳಾರಾಗಿರುವಂತೆ ಮಾಡಿದ್ದಾರೆ.ಹಾಗಾಗಿ ಬಡಾವಣೆಯ ಎಲ್ಲಾ ನಿವಾಸಿಗಳ ಪರವಾಗಿ ಶಾಸಕರಿಗೆ ಧನ್ಯವಾದಗಳನ್ನು ಅರ್ಪಿಸುವುದಾಗಿ ಹೇಳಿದರು.



# ಆಗಸ್ಟ್ 2ರಂದು ಕನ್ನಡ ಭವನದಲ್ಲಿ 'ಭರವಸೆಯ ಬೆಳಕು' ಪ್ರಶಸ್ತಿ ಪ್ರದಾನ

## ಗಡಿನಾಡು ಕನ್ನಡ ಸಮ್ಮೇಳನದಲ್ಲಿ ಆಯ್ಕೆಯಾದ ವಿದ್ಯಾರ್ಥಿ-ಶಿಕ್ಷಕರಿಗೆ ಗೌರವ

ಕಾಸರಗೋಡು : ಕಾಸರಗೋಡು ಕನ್ನಡ ಭವನದಲ್ಲಿ ಆಗಸ್ಟ್ 2ರಂದು (ಭಾನುವಾರ) ಬೆಳಿಗ್ಗೆ 11 ಗಂಟೆಗೆ 'ಭರವಸೆಯ ಬೆಳಕು' ಪ್ರಶಸ್ತಿ ಪ್ರದಾನ ಸಮಾರಂಭ ನಡೆಯಲಿದೆ ಎಂದು ಕನ್ನಡ ಭವನದ ಸ್ಥಾಪಕ ಸಂಚಾಲಕ ಡಾ. ವಾಮನ್ ರಾವ್ ಬೇಕಲ್ ತಿಳಿಸಿದ್ದಾರೆ. ಇತ್ತೀಚೆಗೆ ನಡೆದ ಗಡಿನಾಡು ಕನ್ನಡ ಸಮ್ಮೇಳನ–2026 ಕಾರ್ಯಕ್ರಮದಲ್ಲಿ ಭಾಗವಹಿಸಲು ಅಥವಾ ಗೌರವ ಪ್ರಶಸ್ತಿಗಳನ್ನು ಸ್ವೀಕರಿಸಲು ಸಾಧ್ಯವಾಗದ ವಿದ್ಯಾರ್ಥಿಗಳು ಹಾಗೂ ಶಿಕ್ಷಕರು ಈ ಕಾರ್ಯಕ್ರಮದಲ್ಲಿ ಭಾಗವಹಿಸಿ ತಮ್ಮ ಪ್ರಶಸ್ತಿಗಳನ್ನು ಸ್ವೀಕರಿಸುವಂತೆ ಅವರು ಪ್ರಕಟಣೆಯಲ್ಲಿ ಮನವಿ ಮಾಡಿದ್ದಾರೆ.

'ಭರವಸೆಯ ಬೆಳಕು' ಪ್ರಶಸ್ತಿ ಪುರಸ್ಕೃತ ವಿದ್ಯಾರ್ಥಿಗಳು :ಸಾನ್ವಿ ರಾವ್ (ಮುಲ್ಕಿ), ಅನನ್ಯ (ಮಂಗಳೂರು), ಶ್ರೇಯ (ಬೈಂದೂರು), ತೇಜಸ್ (ಮದ್ದೋಡಿ), ನಿನಾದ್ ರಾವ್, ಧೃತಿ ಜಿ (ಮಂಗಳೂರು), ಶ್ರೇಯಸ್, ಅದಿತಿ (ಬೇಕಲ್), ನಮೃತ, ದೀಕ್ಷಾ ಸೇರಿದಂತೆ ವಿದ್ಯಾರ್ಥಿಗಳು ಪ್ರಶಸ್ತಿಗೆ ಆಯ್ಕೆಯಾಗಿದ್ದಾರೆ.

'ಭರವಸೆಯ ಶಿಕ್ಷಣ ರತ್ನ' ಪ್ರಶಸ್ತಿ ಪುರಸ್ಕೃತ ಶಿಕ್ಷಕರು : ವಿನತ ಕೆ., ನಾಗರಾಜ ಮದ್ದೋಡಿ, ಯಶೋಧ ಪಿ., ಶೋಭಾ ಶರತ್ ಹಾಗೂ ಸುಜಾತ ಅಶೋಕ ಅವರು ಪ್ರಶಸ್ತಿಗೆ ಆಯ್ಕೆಯಾಗಿದ್ದಾರೆ.

ಆಯ್ಕೆಯಾದ ಎಲ್ಲ ವಿದ್ಯಾರ್ಥಿಗಳು ಹಾಗೂ ಶಿಕ್ಷಕರು ನಿಗದಿತ ದಿನಾಂಕ ಮತ್ತು ಸಮಯಕ್ಕೆ ಕನ್ನಡ ಭವನಕ್ಕೆ ಆಗಮಿಸಿ ಗೌರವ ಪ್ರಶಸ್ತಿಗಳನ್ನು ಸ್ವೀಕರಿಸುವಂತೆ ಡಾ. ವಾಮನ್ ರಾವ್ ಬೇಕಲ್ ಮನವಿ ಮಾಡಿದ್ದಾರೆ.

# ಸ್ಥಳೀಯ ಕಲೆ-ಸಂಸ್ಕೃತಿಗೆ ಎಲ್ಲರ ಪ್ರೋತ್ಸಾಹ ಅಗತ್ಯ: ಎನ್.ಎಂ. ರವಿಕುಮಾರ್

## ಬಣವೀಕಲ್ಲಿನಲ್ಲಿ ಸಾಂಸ್ಕೃತಿಕ ಉತ್ಸವ–2026; ಜಾನಪದ ಕಲಾ ವೈಭವ ಅನಾವರಣ




ಕೂಡ್ಲಿಗಿ : ಮೊಬೈಲ್ ಯುಗದಲ್ಲಿ ಸ್ಥಳೀಯ ಕಲೆ, ಸಾಹಿತ್ಯ ಹಾಗೂ ಸಂಗೀತ ಕ್ಷೀಣಿಸುತ್ತಿರುವುದು ವಿಷಾದನೀಯ. ಜಾನಪದ ಕಲೆಗಳನ್ನು ಮುಂದಿನ ಪೀಳಿಗೆಗೆ ಉಳಿಸಿ ಬೆಳೆಸಲು ಎಲ್ಲರೂ ಕೈಜೋಡಿಸಬೇಕು ಎಂದು ಹಿರಿಯ ಸಾಹಿತಿ ಹಾಗೂ ಶರಣ ಸಾಹಿತ್ಯ ಪರಿಷತ್ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಎನ್.ಎಂ. ರವಿಕುಮಾರ್ ಹೇಳಿದರು.

ಸಮೀಪದ ಬಣವೀಕಲ್ಲು ಗ್ರಾಮದ ಕಸ್ತೂರಬಾ ಗಾಂಧಿ ಬಾಲಕಿಯರ ವಸತಿ ಶಾಲೆಯಲ್ಲಿ ಕಲ್ಯಾಣ ಕರ್ನಾಟಕ ಸಾಂಸ್ಕೃತಿಕ ಕಲಾ ಸಂಘ (ರಿ), ತಿಮ್ಮನಹಳ್ಳಿ ಹಾಗೂ ಕನ್ನಡ ಮತ್ತು ಸಂಸ್ಕೃತಿ ನಿರ್ದೇಶನಾಲಯ, ಬೆಂಗಳೂರು ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ್ದ 'ಸಾಂಸ್ಕೃತಿಕ ಉತ್ಸವ–2026' ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಗ್ರಾಮೀಣ ಜಾನಪದ ಹಾಡುಗಳು ಮತ್ತು ಸಾಂಸ್ಕೃತಿಕ ಪರಂಪರೆಯನ್ನು ಉಳಿಸಿ ಬೆಳೆಸುವುದು ಇಂದಿನ ಅಗತ್ಯವಾಗಿದೆ. ಗ್ರಾಮೀಣ ಪ್ರತಿಭೆಗಳನ್ನು ಗುರುತಿಸಿ ಅವರಿಗೆ ಹೆಚ್ಚಿನ ಅವಕಾಶಗಳನ್ನು ಕಲ್ಪಿಸಬೇಕು ಎಂದು ಅವರು ಕರೆ ನೀಡಿದರು.

ಹಿರಿಯ ಸಾಹಿತಿ ಭೀಮಣ್ಣ ಗಜಾಪುರ ಮಾತನಾಡಿ, ವಿದ್ಯಾರ್ಥಿಗಳಲ್ಲಿ ಭಾಷೆ, ಸಂಸ್ಕೃತಿ ಹಾಗೂ ಸಮಾನತೆಯ ಮೌಲ್ಯಗಳನ್ನು ಬೆಳೆಸುವ ಜವಾಬ್ದಾರಿ ಶಿಕ್ಷಕರ ಮೇಲಿದೆ. ಶಿಕ್ಷಣದ ಜೊತೆಗೆ ಸಾಂಸ್ಕೃತಿಕ ಚಟುವಟಿಕೆಗಳಿಗೂ ಆದ್ಯತೆ ನೀಡಬೇಕು ಎಂದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಮಾಸಾಶನ ಮಂಜೂರಾತಿ ಸಮಿತಿ ಮಾಜಿ ಸದಸ್ಯ ಚಿನ್ನೋಬನಹಳ್ಳಿ ಡಿ.ಒ. ಮೊರಾರ್ಜಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಕಸ್ತೂರಬಾ ಗಾಂಧಿ ಬಾಲಕಿಯರ ವಸತಿ ಶಾಲೆಯ ಮುಖ್ಯಶಿಕ್ಷಕಿ ರುಬಿನಾ ಖಾನಂ ಅಧ್ಯಕ್ಷತೆ ವಹಿಸಿದ್ದರು.

ಕಾರ್ಯಕ್ರಮದಲ್ಲಿ ಕಲ್ಯಾಣ ಕರ್ನಾಟಕ ಸಾಂಸ್ಕೃತಿಕ ಕಲಾ ಸಂಘದ ಕಾರ್ಯದರ್ಶಿ ಡಿ.ಬಿ. ನಿಂಗರಾಜ್, ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ತಾಲೂಕು ಅಧ್ಯಕ್ಷ ಹುಡೇಂ ಕೃಷ್ಣಮೂರ್ತಿ, ಹಿರಿಯ ಕಲಾವಿದರಾದ ಬಸವರಾಜಪ್ಪ, ಬಿ.ಎಸ್. ಪ್ರಶಾಂತಗೌಡ, ಬಿ. ಚೌಡೇಶ್, ಮುಖ್ಯಶಿಕ್ಷಕಿ ಪಾರ್ವತಿ, ಶಿಕ್ಷಕಿಯರಾದ ಮಂಜುಳಾ, ವಿಶಾಲಾಕ್ಷಿ, ಗೀತಾ ಭಾಪ್ರಿ, ವಾರ್ಡನ್ ತೇಜಾವತಿ ಹಾಗೂ ಹಲವು ಕಲಾವಿದರು ಮತ್ತು ಗಣ್ಯರು ಭಾಗವಹಿಸಿದ್ದರು.

ವೀರಗಾಸೆ, ಡೊಳ್ಳು ಕುಣಿತ, ಸೋಬಾನೆ, ಜಾನಪದ ಗೀತೆಗಳು, ಸುಗಮ ಸಂಗೀತ ಹಾಗೂ ವಚನ ಗಾಯನ ಸೇರಿದಂತೆ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ಪ್ರೇಕ್ಷಕರ ಮನಸೂರೆಗೊಂಡವು.

# ರೋಣದಲ್ಲಿ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆಯ ಭೇಟಿ: ಸಂತ್ರಸ್ತೆಗೆ ಸಾಂತ್ವನ, ಅಧಿಕಾರಿಗಳಿಗೆ ಖಡಕ್ ಎಚ್ಚರಿಕೆ



ರೋಣ: ಕರ್ನಾಟಕ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷರಾದ ಡಾ. ನಾಗಲಕ್ಷ್ಮಿ ಚೌಧರಿ ಅವರು ರೋಣ ತಾಲೂಕಿನಾದ್ಯಂತ ಬಿರುಸಿನ ಪ್ರವಾಸ ಕೈಗೊಂಡು, ಮಹಿಳೆಯರ ಮೇಲಿನ ದೌರ್ಜನ್ಯಗಳ ವಿರುದ್ಧ ಅಧಿಕಾರಿಗಳಿಗೆ ಚಾಟಿ ಬೀಸುವುದರ ಜೊತೆಗೆ, ಸಾರ್ವಜನಿಕರಲ್ಲಿ ಭರವಸೆ ಮೂಡಿಸಿದರು.

ತಾಲೂಕಿನ ಅರಹುಣಸಿ ಗ್ರಾಮದಲ್ಲಿ ಇತ್ತೀಚೆಗೆ ಅತ್ಯಾಚಾರಕ್ಕೊಳಗಾಗಿ ಚೇತರಿಸಿಕೊಳ್ಳುತ್ತಿರುವ ಬುದ್ಧಿಮಾಂದ್ಯ ಸಂತ್ರಸ್ತ ಯುವತಿಯ ರೇಕ್ ಪತ್ರೆಯ ಗುಡಿಸಲಿಗೆ ಆಯೋಗದ ಅಧ್ಯಕ್ಷರು ನೇರ ಭೇಟಿ ನೀಡಿ–ದರು. ಸಂತ್ರಸ್ತೆಯ ಕೈ ಹಿಡಿದು ಧೈರ್ಯ ತುಂಬಿದ ಅವರು, ಆಕೆಯ ಕೌಟುಂಬಿಕ ಹಾಗೂ ಆರ್ಥಿಕ ಸಂಕಷ್ಟ ಕಂಡು ತೀವ್ರ ಕಳವಳ ವ್ಯಕ್ತಪಡಿಸಿದರು. ಸ್ಥಳದಲ್ಲೇ ಇದ್ದ ರೋಣ ಇಓ ಚಂದ್ರಶೇಖರ ಕಂದಕೂರು ತಹಶೀಲ್ದಾರ್ ನಾಗರಾಜ್ ಕೆ. ಹಾಗೂ ಸಿಡಿಪಿಒ ಅಧಿಕಾರಿಗಳಿಗೆ ಖಡಕ್ ಸೂಚನೆ ನೀಡಿದ ಅವರು, ಸಂತ್ರಸ್ತೆಗೆ ತಕ್ಷಣವೇ ಆಶ್ರಯ ಯೋಜನೆಯಡಿ ನಿವೇಶನ ಗುರುತಿಸಿ ಮನೆ ನಿರ್ಮಿಸಿಕೊಡಬೇಕು ಹಾಗೂ ಸರ್ಕಾರದಿಂದ ದೊರೆಯಬೇಕಾದ ಬಾಕಿ ಪರಿಹಾರ, ಪಿಂಚಣಿ ಮತ್ತು ಪೌಷ್ಟಿಕ ಆಹಾರ ವಿಳಂಬವಾಗದಂತೆ ತಲುಪಿಸಬೇಕು ಎಂದು ಕಟ್ಟುನಿಟ್ಟಿನ ಆದೇಶ ಹೊರಡಿಸಿದರು.

ಅರಹುಣಸಿ ಗ್ರಾಮದಿಂದ ಹಿಂದಿರುಗುವ ಮಾರ್ಗಮಧ್ಯೆ ಜಮೀನಿನಲ್ಲಿ ಕೆಲಸ ಮಾಡುತ್ತಿದ್ದ ಕೂಲಿ ಮಹಿಳೆಯರನ್ನು ಭೇಟಿಯಾದಾಗ ಗ್ರಾಮೀಣ ಭಾಗದಲ್ಲಿ ಮಿತಿಮೀರಿದ ಅಕ್ರಮ ಸಾರಾಯಿ ಮಾರಾಟದ ಬಗ್ಗೆ ಮಹಿಳೆಯರು ಕಣ್ಣೀರಿಟ್ಟರು. ದುಡಿದ ಹಣವೆಲ್ಲ ಕುಡಿತಕ್ಕೆ ಬಲಿಯಾಗುತ್ತಿರುವ ಅಳಲನ್ನು ಆಲಿಸಿದ ಡಾ. ನಾಗಲಕ್ಷ್ಮಿ ಚೌಧರಿ ಅವರು, ತಕ್ಷಣವೇ ಅಬಕಾರಿ ಹಾಗೂ ಪೊಲೀಸ್ ಅಧಿಕಾರಿಗಳಿಗೆ ಫೋನ್ ಮೂಲಕ ಕ್ಲಾಸ್ ತೆಗೆದುಕೊಂಡರು. "ಗ್ರಾಮೀಣ ಭಾಗದಲ್ಲಿ ಅಕ್ರಮ ಸಾರಾಯಿ ತಡೆಯದಿದ್ದರೆ ನಿಮ್ಮ ಮೇಲೆಯೇ ಶಿಸ್ತುಕ್ರಮ ಜರುಗಿಸಲಾಗುವುದು ಎಂದು ಎಚ್ಚರಿಸಿದರು. ಜೊತೆಗೆ, ಶ್ರಮಿಕ ಮಹಿಳೆಯರಿಗೆ ಕಾರ್ಮಿಕ ಕಾರ್ಡ್ ಮಾಡಿಸಿಕೊಡುವಂತೆ ಇಲಾಖೆಗೆ ನಿರ್ದೇಶನ ನೀಡಿದರು.

# ಮಲ್ಲಾಪುರದಲ್ಲಿ ಹಾರಾಡಿದ ಕೃಷಿ ಡ್ರೋನ್

## ನ್ಯಾನೋ ಯೂರಿಯಾ, ನ್ಯಾನೋ ಡಿಎಪಿ ಸಿಂಪರಣೆಗೆ ಜಂಟಿ ಕೃಷಿ ನಿರ್ದೇಶಕಿ ಚೇತನಾ ಪಾಟೀಲ್ ಚಾಲನೆ



ಗದಗ/ಮಲ್ಲಾಪುರ : ಕೃಷಿಯಲ್ಲಿ ಆಧುನಿಕ ತಂತ್ರಜ್ಞಾನ ಬಳಕೆಗೆ ಉತ್ತೇಜನ ನೀಡುವ ನಿಟ್ಟಿನಲ್ಲಿ ಮಲ್ಲಾಪುರ ಗ್ರಾಮದಲ್ಲಿ ಗೋವಿನ ಜೋಳದ ಬೆಳೆಗೆ ಡ್ರೋನ್ ತಂತ್ರಜ್ಞಾನದ ಮೂಲಕ ನ್ಯಾನೋ ಯೂರಿಯಾ ಹಾಗೂ ನ್ಯಾನೋ ಡಿಎಪಿ ಸಿಂಪರಣೆ ಮಾಡುವ ಪ್ರಾತ್ಯಕ್ಷಿಕೆ ಕಾರ್ಯಕ್ರಮ ಯಶಸ್ವಿಯಾಗಿ ನಡೆಯಿತು. ಗದಗ ಜಂಟಿ ಕೃಷಿ ನಿರ್ದೇಶಕಿ ಚೇತನಾ ಪಾಟೀಲ್ ಕಾರ್ಯಕ್ರಮಕ್ಕೆ ಚಾಲನೆ ನೀಡಿ ರೈತರಿಗೆ ತಂತ್ರಜ್ಞಾನದ ಮಹತ್ವದ ಕುರಿತು ಮಾಹಿತಿ ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಸಾಂಪ್ರದಾಯಿಕ ವಿಧಾನಕ್ಕೆ ಹೋಲಿಸಿದರೆ ಡ್ರೋನ್ ತಂತ್ರಜ್ಞಾನದಿಂದ ಕೇವಲ 10 ರಿಂದ 15 ನಿಮಿಷಗಳಲ್ಲಿ ಒಂದು ಎಕರೆ ಪ್ರದೇಶಕ್ಕೆ ಸಮರ್ಪಕವಾಗಿ ಗೊಬ್ಬರ ಸಿಂಪರಣೆ ಮಾಡಬಹುದಾಗಿದೆ.

ಇದರಿಂದ ಕೂಲಿ ಕಾರ್ಮಿಕರ ಕೊರತೆ ನಿವಾರಣೆಯಾಗುವುದರ ಜೊತೆಗೆ ಕೃಷಿ ವೆಚ್ಚವೂ ಗಣನೀಯವಾಗಿ ಕಡಿಮೆಯಾಗುತ್ತದೆ ಎಂದು ತಿಳಿಸಿದರು. ನ್ಯಾನೋ ಯೂರಿಯಾ ಹಾಗೂ ನ್ಯಾನೋ ಡಿಎಪಿ ಬೆಳೆಗಳ ಎಲೆಗಳ ಮೂಲಕ ನೇರವಾಗಿ ಹೀರಿಕೊಳ್ಳಲ್ಪಡುವುದರಿಂದ ಸಸ್ಯಗಳಿಗೆ ಅಗತ್ಯ ಪೋಷಕಾಂಶಗಳು ಪರಿಣಾಮಕಾರಿಯಾಗಿ ಲಭ್ಯವಾಗುತ್ತವೆ.

# ಇ ಸ್ವತ್ತು 2.0 ತಾಂತ್ರಿಕ ದೋಷ ಸರಿಪಡಿಸಲು ಶಾಸಕರಿಗೆ ಮನವಿ



ಯಾದಗಿರಿ: ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಜಾರಿಯಲ್ಲಿರುವ ಇ–ಸ್ವತ್ತು 2.0 ಹಾಗೂ ಇ–ಖಾತಾ ವ್ಯವಸ್ಥೆಯ ತಾಂತ್ರಿಕ ದೋಷಗಳಿಂದ ಗ್ರಾಮೀಣ ಭಾಗದ ಜನರು ತೀವ್ರ ಸಂಕಷ್ಟ ಅನುಭವಿಸುತ್ತಿರುವ ಹಿನ್ನೆಲೆಯಲ್ಲಿ, ಸಮಸ್ಯೆಯನ್ನು ಮುಂಬರುವ ವಿಧಾನಸಭೆ ಅಧಿವೇಶನದಲ್ಲಿ ಪ್ರಸ್ತಾಪಿಸಿ ಶೀಘ್ರ ಪರಿಹಾರ ಕಲ್ಪಿಸುವಂತೆ ಒತ್ತಾಯಿಸಿ ಜಯ ಕರ್ನಾಟಕ ಸಂಘಟನೆಯ ಗುರುಮಠಕಲ್ ತಾಲೂಕು ಘಟಕದ ವತಿಯಿಂದ ತಹಸೀಲ್ದಾರ್ ಮೂಲಕ ಶಾಸಕ ಶರಣಗೌಡ ಕಂದಕೂರ ಅವರಿಗೆ ಮನವಿ ಸಲ್ಲಿಸಲಾಯಿತು.

ಮನವಿ ಸಲ್ಲಿಸಿ ಮಾತನಾಡಿದ ತಾಲೂಕು ಅಧ್ಯಕ್ಷ ನಾಗೇಶ್ ಗದ್ದಿಗಿ, ಇ–ಖಾತಾ ವ್ಯವಸ್ಥೆ ಜಾರಿಯಾದ ಬಳಿಕ ತಾಂತ್ರಿಕ ಸಮಸ್ಯೆಗಳ ಕಾರಣದಿಂದ ಕಳೆದ

ಹಲವು ತಿಂಗಳುಗಳಿಂದ ಅರ್ಜಿಗಳ ವಿಲೇವಾರಿ ವಿಳಂಬವಾಗಿದ್ದು, ಸಾವಿರಾರು ಅರ್ಜಿಗಳು ಬಾಕಿ ಉಳಿದಿವೆ. ಇದರಿಂದ ಸಾರ್ವಜನಿಕರು ಪ್ರತಿನಿತ್ಯ ಗ್ರಾಮ ಪಂಚಾಯಿತಿ ಕಚೇರಿಗಳಿಗೆ ಅಲೆದಾಡುವಂತಾಗಿದೆ ಎಂದು ಆರೋಪಿಸಿದರು. ನಿರಂತರ ಸರ್ವರ್ ಡೌನ್ ಆಗುವುದು, ಲಾಗಿನ್ ಸಮಸ್ಯೆ, ಜಿಪಿಎಸ್ ಲೊಕೇಶನ್ ದೋಷ, ಡೇಟಾ ಅಪ್‌ಲೋಡ್ ವಿಫಲವಾಗುವುದು ಹಾಗೂ ಅರ್ಜಿ ಸಲ್ಲಿಸುವ ಹಂತದಲ್ಲೇ ತಂತ್ರಾಂಶ ಸ್ಥಗಿತಗೊಳ್ಳುವುದು ಪ್ರಮುಖ ಸಮಸ್ಯೆಗಳಾಗಿವೆ.

ಇದರಿಂದ ಆಸ್ತಿ ಖರೀದಿ–ಮಾರಾಟ, ಬ್ಯಾಂಕ್ ಸಾಲ ಪಡೆಯುವುದು ಹಾಗೂ ಶಿಕ್ಷಣ, ವೈದ್ಯಕೀಯ ಮತ್ತು ವಿವಾಹದಂತಹ ತುರ್ತು ಅಗತ್ಯಗಳಿಗೆ ಆಸ್ತಿ ದಾಖಲೆಗಳನ್ನು ಬಳಸಿಕೊಳ್ಳಲು ಸಾಧ್ಯವಾಗದೆ ಬಡ ಹಾಗೂ ಮಧ್ಯಮ ವರ್ಗದ ಜನರು ಸಂಕಷ್ಟಕ್ಕೆ ಸಿಲುಕಿದ್ದಾರೆ ಎಂದು ಹೇಳಿದರು.

ಇ–ಸ್ವತ್ತು 2.0 ತಂತ್ರಾಂಶದ ಸರ್ವರ್ ಸಾಮರ್ಥ್ಯವನ್ನು ಹೆಚ್ಚಿಸಿ ದೋಷಗಳನ್ನು ಶಾಶ್ವತವಾಗಿ ಸರಿಪಡಿಸಬೇಕು, ಬಾಕಿ ಇರುವ ಅರ್ಜಿಗಳ ಶೀಘ್ರ ವಿಲೇವಾರಿಗೆ ವಿಶೇಷ ಅಭಿಯಾನ ನಡೆಸಬೇಕು ಹಾಗೂ ಸಮಸ್ಯೆ ಬಗೆಹರಿಯುವವರೆಗೆ ಪರ್ಯಾಯ ಅಥವಾ ಸರಳ ನೋಂದಣಿ ವ್ಯವಸ್ಥೆಗೆ ಅವಕಾಶ ಕಲ್ಪಿಸಬೇಕು ಎಂದು ಮನವಿಯಲ್ಲಿ ಆಗ್ರಹಿಸಲಾಗಿದೆ.

ಈ ವಿಷಯವನ್ನು ವಿಧಾನಸಭೆಯಲ್ಲಿ ಪ್ರಸ್ತಾಪಿಸಿ ಕಂದಾಯ ಹಾಗೂ ಗ್ರಾಮೀಣಾಭಿವೃದ್ಧಿ ಸಚಿವರ ಗಮನಕ್ಕೆ ತಂದು ಶೀಘ್ರ ಪರಿಹಾರ ಒದಗಿಸುವಂತೆ ಶಾಸಕರಿಗೆ ಮನವಿ ಮಾಡಲಾಗಿದೆ.

ಈ ಸಂದರ್ಭದಲ್ಲಿ ಮಲ್ಲಿಕಾರ್ಜುನ ಕಾಕಲವರ, ನರಸಿಂಹಲು ಗಂಗನೋಳ, ಕಾಶಪ್ಪ ಬೋಯ, ರಾಮುಲು ಕೋಡಿಗಂಟಿ, ಬಿ.ಎಸ್. ತಲಾರಿ, ಆಯಾಜ್ ಅಲಿ, ರವಿಕುಮಾರ್ ವಾರದ, ಅಂಜಿ ಮಂಗಮೋಳ, ಸಿದ್ದಪ್ಪ ಮದ್ದೂರು, ಬನ್ನು ಮಡುಗು, ಸಾಬು ಸೇರಿದಂತೆ ಸಂಘಟನೆಯ ಹಲವು ಪದಾಧಿಕಾರಿಗಳು ಉಪಸ್ಥಿತರಿದ್ದರು.

# ಬಿಜೆಪಿ ಶಾಸಕ ಯಶಪಾಲ್ ಸುವರ್ಣ ಹೇಳಿಕೆ ಖಂಡನೆ

## ಎಫ್‌ಐಆರ್ ದಾಖಲು ಮಾಡಲು : ಬಳ್ಳಾರಿ ನಗರ ಕಾಂಗ್ರೆಸ್ ಆಗ್ರಹ



ಬಳ್ಳಾರಿ : ಉಡುಪಿ ಶಾಸಕ ಯಶಪಾಲ್ ಸುವರ್ಣ ಕಾಂಗ್ರೆಸ್ ನಾಯಕ ಹಾಗೂ ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಅವರ ಕುರಿತು ಪ್ರಚೋದನಕಾರಿ ಹಾಗೂ ದ್ವೇಷಪೂರಿತ ಹೇಳಿಕೆಗಳನ್ನು ಖಂಡಿಸಿ, ಯಶಪಲ್ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳುವಂತೆ ಒತ್ತಾಯಿಸಿ ಬಳ್ಳಾರಿ ನಗರ ಜಿಲ್ಲಾ ಕಾಂಗ್ರೆಸ್ ಸಮಿತಿಯು ಬಳ್ಳಾರಿಯ ಬ್ರೂಸ್‌ಪೇಟೆ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಲಾಯಿತು.

ಜುಲೈ 28ರಂದು ಉಡುಪಿಯಲ್ಲಿ ನಡೆದ ಪ್ರತಿಭಟನೆ ವೇಳೆ ಶಾಸಕ ಯಶಪಾಲ್ ಸುವರ್ಣ ಅವರು ರಾಹುಲ್ ಗಾಂಧಿ ಅವರ ಬಗ್ಗೆ ಅವಹೇಳನಕಾರಿ ಹಾಗೂ ಪ್ರಚೋದನಕಾರಿ ಹೇಳಿಕೆಗಳನ್ನು

ಅಲ್ಲದೆ, ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್ ಅವರ ವಿರುದ್ಧವೂ ಅವಮಾನಕಾರಿ ಘೋಷಣೆಗಳನ್ನು ಕೂಗಲಾಗಿದೆ ಎಂದು ದೂರಿನಲ್ಲಿ ಉಲ್ಲೇಖಿಸಿ

ಕಾಂಗ್ರೆಸ್ ಪಕ್ಷದ ಮುಖಂಡರು ಆರೋಪಿಸಿದ್ದಾರೆ. ಈ ಸಂದರ್ಭದಲ್ಲಿ ಬಳ್ಳಾರಿ ನಗರ ಜಿಲ್ಲಾ ಪ್ರಚಾರ ಸಮಿತಿಯ ಅಧ್ಯಕ್ಷ ಜಿಎಸ್ ಈರನಗೌಡ ಮಾತನಾಡಿ,

ಕೆಪಿಸಿಸಿ ಪ್ರಚಾರ ಸಮಿತಿಯ ನಿರ್ದೇಶನದ ಮೇರೆಗೆ ಬಳ್ಳಾರಿ ನಗರ ಜಿಲ್ಲಾ ಕಾಂಗ್ರೆಸ್ ಸಮಿತಿ ಹಾಗೂ ಜಿಲ್ಲಾ ಪ್ರಚಾರ ಸಮಿತಿಯ ವತಿಯಿಂದ ಬ್ರೂಸ್‌ಪೇಟೆ ಪೊಲೀಸ್ ಠಾಣೆಯಲ್ಲಿ ದೂರು ಸಲ್ಲಿಸಲಾಗಿದ್ದು, ಸಂಬಂಧಿತ ಭಾರತೀಯ ಕಾನೂನುಗಳಡಿ ಯಶಪಾಲ್ ಸುವರ್ಣ ಅವರ ವಿರುದ್ಧ ಪ್ರಕರಣ ದಾಖಲಿಸಿ, ಸೂಕ್ತ ತನಿಖೆ ನಡೆಸಿ ಕಠಿಣ ಕಾನೂನು ಕ್ರಮ ಕೈಗೊಳ್ಳುವಂತೆ ಒತ್ತಾಯಿಸಿದರು.ಈ ಸಂದರ್ಭದಲ್ಲಿ ಬಳ್ಳಾರಿ ನಗರ ಜಿಲ್ಲಾ ಕಾಂಗ್ರೆಸ್ ಸಮಿತಿಯ ಅಧ್ಯಕ್ಷ ಅಲ್ಲಂ ಪ್ರಶಾಂತ್, ಬುಡಾ ಅಧ್ಯಕ್ಷ ಆಂಜಿನೇಯಲು, ಡಿಸಿಸಿ ಕಾರ್ಯಾಧ್ಯಕ್ಷ ಭೋಯಾಪಾಟಿ ವಿಷ್ಣು, ಮುಖಂಡರಾದ ಜೆರಾಲ್ಡ್, ಅಸುಂಡಿ ಹನುಮೇಶ್, ಪರ್ವಿನ್ ಬಾನು ಹಾಗೂ ಜಿಲ್ಲಾ ಪ್ರಚಾರ ಸಮಿತಿಯ ಪದಾಧಿಕಾರಿಗಳು ಉಪಸ್ಥಿತರಿದ್ದರು.

# ಖಾಸಗೀಕರಣದಿಂದ ಕನ್ನಡ ಶಾಲೆಗಳು ಮರೆಯುವಂತಾಗಬಾರದು : ಶಿವಾನಂದ ಪೂಜಾರ

ಸಂಶಿ : ಖಾಸಗೀಕರಣದಿಂದ ಕನ್ನಡ ಶಾಲೆಗಳು ಮರೆಯುವಂತಾಗಬಾರದು, ಕನ್ನಡ ಶಾಲೆಗಳಲ್ಲಿ ಎಲ್ಲ ರೀತಿಯ ಸೌಲಭ್ಯಗಳು ದೊರೆಯುತ್ತಿದ್ದು ಅದರ ಸದುಪಯೋಗ ಪಡೆದುಕೊಳ್ಳಿ ಎಂದು ಶ್ರೀ ಕರಿಸಿದ್ದೇಶ್ವರ ದೇವಸ್ಥಾನದ ಧರ್ಮದರ್ಶಿ ಶಿವಾನಂದ ಪೂಜಾರ ಹೇಳಿದರು. ಅವರು ಗ್ರಾಮದ ಸರಕಾರಿ ಹಿರಿಯ ಪ್ರಾಥಮಿಕ ನಂ. 01 ಶಾಲೆಯಲ್ಲಿ ಮಹಾಗಂಗಾ ಫೌಂಡೇಶನ್ ಉದ್ಘಾಟನಾ ಸಮಾರಂಭದಲ್ಲಿ ಲೋಕಮಾನ್ಯ ಭಾಲ್ ಗಂಗಾಧರ ಯುವಕ ಮಂಡಳಿಯ ವತಿಯಿಂದ ಬಾಲ್ ಗಂಗಾಧರ ತಿಲಕ್ ಹಾಗೂ ಚಂದ್ರಶೇಖರ್ ಅಜಾದ ಜಯಂತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿ ಬಾಲ್ ಗಂಗಾಧರ ತಿಲಕ್ ಅವರ ಆದರ್ಶದಲ್ಲಿ ಸಾಮಾಜಿಕವಾಗಿ ಜನಪರಚಿಂತನೆಯೊಂದಿಗೆ ಮಹಾಗಂಗಾ ಫೌಂಡೇಶನ್ ನ್ನು ಪ್ರಾರಂಭಿಸಲಾಗಿದೆ. ಗ್ರಾಮೀಣ ಪ್ರದೇಶದ ಕನ್ನಡ ಶಾಲೆಗಳಲ್ಲಿ ಮಕ್ಕಳ ಉನ್ನತ ವ್ಯಾಸಂಗಕ್ಕಾಗಿ ಪುಸ್ತಕ ಪೆನ್ ನೀಡುತ್ತೀರುವುದು ಶ್ಲಾಘನೀಯವಾಗಿದೆ. ಇಂದಿನ ಮಕ್ಕಳು ಕಲಿತು ಭವಿಷ್ಯದಲ್ಲಿ ಇತರರಿಗೆ ಮಾದರಿಯಾಗುವಂತೆ ಉನ್ನತ ಹುದ್ದೇಯಲ್ಲಿ ಸೇವೆ ಸಲ್ಲಿಸಲೂ ಸನ್ನದ್ದರಾಗಿ ಗ್ರಾಮದ ಕೀರ್ತಿಯನ್ನು ಹೆಚ್ಚಿಸಬೇಕು ಎಂದರು. ಹಿರಿಯ ಮುಖ್ಯೋಪಾದ್ಯಯ ಎಸ್ ವೈ ಸೊರಟಿ ಮಾತನಾಡಿ ಪ್ರತಿ ಯಶಸ್ವೀ ಸಾಧಕನ ಜೀವನದಲ್ಲಿ ಪ್ರಾಥಮಿಕ ಶಾಲಾ ಹಂತವು ಭದ್ರಬುನಾದಿಯಾಗಿದೆ. ವರ್ಷದಿಂದ ವರ್ಷಕ್ಕೇ ಪ್ರಾಥಮಿಕ ಶಾಲೆಗಳಲ್ಲಿ ದಾಖಲಾತಿ ಕ್ಷೀಣಿಸುತ್ತಿದೆ, ಶಾಲೆಗಳಲ್ಲಿ ಪಠ್ಯ ಮತ್ತು ಪಠ್ಯೇತರ ಚಟುವಟಿಕೆಗಳಲ್ಲಿ ತಮ್ಮನ್ನು ತಾವೂ ತೊಡಗಿಸಿಕೊಂಡು ಇತರರಿಗೆ ಮಾದರಿಯಾಗಿ ಉನ್ನತ ಸೇವೆಯಲ್ಲಿದ್ದರೆ. ಪಾಲಕರು ಮಕ್ಕಳ ಉನ್ನತ ವ್ಯಾಸಂಗಕ್ಕಾಗಿ ಭವಿಷ್ಯವನ್ನು ಯಶಸ್ವೀಯಾಗಿ ರೂಪಿಸಿಕೊಳ್ಳಲೂ ಸಹಕರಿಸಿ ಎಂದರು. ಹೊಂಬೆಳಕು ಫೌಂಡೇಶನ್ ಅದ್ಯಕ್ಷ ವಿದ್ಯಾಧರ ಸುಂಕದ , ರೈತ ಮುಖಂಡ ಗುರುಪಾದಪ್ಪ ಬಂಕದ ಸೇರಿದಂತೆ ಇತರರು ಇದ್ದರು.

EDITOR : S VENKATESULU, D.NO.: 4/38, MAIN ROAD, SETTUR, ANANTHAPUR, ANDHRA PRADESH - 515767, PUBLISHER : S VENKATESULU 237, Ward No 22 Talur Road, Lingamma Compund, Bellary, Bellary, Karnataka - 583101. KARNATAKA - 583113.
OWNER : S VENKATESULU D.NO.: 4/38, MAIN ROAD, SETTUR, ANANTHAPUR, ANDHRA PRADESH - 515767. PRINTER: VADDARA DODDA VEERESH, 1ST WARD, NAYAKARA ONI, AGASARA ONI, AT/POST-SOMALAPURA, BELLARY, KARNATAKA - 583101.